ಸಂಪುಟ : 10 ಸಂಚಿಕೆ: 207 ಪುಟ : 4+2 ಬೆಲೆ: 3.00 ಗುರುವಾರ ಸೆಪ್ಟೆಂಬರ್ 25 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 207 Pages : 4+2 Price : 3.00 Thursday September 25 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆ.ವ್ಹಿ ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಸೆ.26ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 4 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರದಿಂದ ಪೂರೈಕೆಯಾಗುವ 110 ಕೆ.ವ್ಹಿ. ಬನ್ನಿಕೊಪ್ಪ ವಿಂಡ್, 110 ಕೆ.ವ್ಹಿ ಆದಿತ್ಯ ಬಿರ್ಲಾ ಸೋಲಾರ್, 33 ಕೆ.ವ್ಹಿ. ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆ.ವ್ಹಿ. ಸೂರಣಗಿ ಉಪಕೇಂದ್ರ ಮತ್ತು 33 ಕೆ.ವ್ಹಿ. ಹೊಳೆಇಟಗಿ ಉಪಕೇಂದ್ರಗಳಿಂದ ಪೂರೈಸಲ್ಪಡುವ ಎಲ್ಲಾ ನಗರ, ಕೈಗಾರಿಕಾ, ನೀರಾವರಿ ಪಂಪ್‌ಸೆಟ್‌ಗಳ ಮಾರ್ಗ, ಕುಡಿಯುವ ನೀರು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.


## ಭೈರಪ್ಪ ನಿಧನಕ್ಕೆ ಸಚಿವ ಎಚ್.ಕೆ.ಪಾಟೀಲ ಸಂತಾಪ

■ ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ಹಿರಿಯ ಸಾಹಿತಿ ಎಸ್ ಎಲ್ ಭೈರಪ್ಪ ಅವರ ನಿಧನಕ್ಕೆ ಸಚಿವ ಎಚ್ ಕೆ ಪಾಟೀಲ್ ಸಂತಾಪ ಸೂಚಿಸಿದ್ದಾರೆ.

ಗದಗನಲ್ಲಿ ಮಾತನಾಡಿದ ಅವರು, ಸುದ್ದಿ ತಿಳಿದು ಸಿಡಿಲು ಬಡಿದಂತಾಗಿದೆ. ಭೈರಪ್ಪನವರು ಶ್ರೇಷ್ಠ ಸಾಹಿತ್ಯವನ್ನು ಸೃಷ್ಟಿ ಮಾಡಿದವರು. ಸತ್ಯವನ್ನು ಹೆಕ್ಕಿ ತೆಗೆದು ಸಮಾಜವನ್ನು ಜಾಗೃತಿಗೊಳಿಸಿದವರಾಗಿದ್ದರು ಎಂದರು.

ಸಮುದಾಯಕ್ಕೆ ತಕ್ಕ ತತ್ವ, ಸಿದ್ಧಾಂತ, ಸತ್ಯಕ್ಕಾಗಿ ಹೋರಾಟ ಮಾಡಿದವರು, ಭೈರಪ್ಪನವರ ಅಗಲಿಕೆಯಿಂದ ಸಾಹಿತ್ಯ ಲೋಕಕ್ಕೆ ತುಂಬಲಾರದ ಹಾನಿಯಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ ಎಂದು ಸಚಿವ ಎಚ್ ಕೆ ಪಾಟೀಲ್ ಸಂತಾಪ ಸೂಚಿಸಿದ್ದಾರೆ.



ಗದಗ: ತಾಲೂಕಿನ ನರಸಾಪುರ ಗ್ರಾಮ ದೇವತೆಯಾದ ಶ್ರೀ ಲಕ್ಕಮ್ಮದೇವಿಗೆ ದಸರಾ ಹಬ್ಬದ ಮಹೋತ್ಸವದ ಅಂಗವಾಗಿ ಬುಧವಾರದಂದು ವಿಶೇಷ ಅಲಂಕಾರದೊಂದಿಗೆ ಪೂಜೆ ನೆರೆವೇರಿಸಲಾಯಿತು.

### ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ಉಪಾಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಸ್ಪಷ್ಟನೆ

# ಲಿಂಗಾಯತ ಸಮುದಾಯದ ಜನರಲ್ಲಿ ಗೊಂದಲ ಬೇಡ

■ ವಿಜಯಸಾಕ್ಷಿ ಸುದ್ದಿ, ಗದಗ

ರೆಡ್ಡಿ ಸಮಾಜದವರು ಸಮೀಕ್ಷೆಯಲ್ಲಿ ಧರ್ಮದ ಕಾಲಂನಲ್ಲಿ ವೀರಶೈವ ಲಿಂಗಾಯತ, ಜಾತಿ ಕಾಲಂನಲ್ಲಿ ರೆಡ್ಡಿ ಲಿಂಗಾಯತ, ಉಪಜಾತಿ ಕಾಲಂನಲ್ಲಿ ರೆಡ್ಡಿ ಲಿಂಗಾಯತ ಎಂದೇ ನಮೂದಿಸಬೇಕು ಎಂದು ಕರ್ನಾಟಕ ರಾಜ್ಯ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ಉಪಾಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ಸ್ಪಷ್ಟಪಡಿಸಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ವೈಷ್ಣವ ಸಂಪ್ರದಾಯಕ್ಕೆ ಸೇರಿದ ಕೆಲ ರಾಜಕೀಯ ಮುಖಂಡರು ಮೀಸಲಾತಿ ಕಳೆದುಕೊಳ್ಳುತ್ತೇವೆ ಎನ್ನುವ ವದಂತಿ ಹರಿಬಿಟ್ಟು ಮತ್ತು ತಮ್ಮ ಸಂಖ್ಯೆಯನ್ನು ಹೆಚ್ಚು ತೋರಿಸಿಕೊಳ್ಳಲು ಹಿಂದೂ ರೆಡ್ಡಿ ಎಂದು ನಮೂದಿಸುವಂತೆ ಪ್ರಚಾರ ನಡೆಸುತ್ತಿದ್ದಾರೆ. ರಾಜ್ಯದ ಲಿಂಗಾಯತ ಸಮುದಾಯದ ಜನ ಗೊಂದಲಕ್ಕೆ ಒಳಗಾಗದೆ ವೀರಶೈವ ಲಿಂಗಾಯತ ಮಹಾಸಭಾ ಕೈಗೊಂಡ ನಿರ್ಣಯದಂತೆ ಸಮೀಕ್ಷೆಯಲ್ಲಿ ಮಾಹಿತಿ ನಮೂದಿಸಬೇಕು ಎಂದು ವಿನಂತಿಸಿದರು.




ಸಚಿವ ರಾಮಲಿಂಗಾರೆಡ್ಡಿ ಅವರು ಸಮೀಕ್ಷೆಯಲ್ಲಿ ಹಿಂದೂ ರೆಡ್ಡಿ ಎಂದು ನಮೂದಿಸುವಂತೆ ಪ್ರಕಟಣೆ ಹೊರಡಿಸಿರುವುದು ಸರಿಯಲ್ಲ. ಅವರ ನಿರ್ಧಾರ–ಕ್ಕೆ ಅನೇಕ ರೆಡ್ಡಿ ಸಮುದಾಯದ ನಾಯಕರು ಸಹಮತ ವ್ಯಕ್ತಪಡಿಸಿಲ್ಲ ಎನ್ನುವುದಕ್ಕೆ ಅವರೊಬ್ಬರೇ ಮನವಿ ಮಾಡಿರುವ ಜಾಹೀರಾತು ಸಾಕ್ಷಿಯಾಗಿದೆ. ಹೀಗಾಗಿ 14ನೇ ಶತಮಾನದ ಶಿವಶರಣೆ ಹೇಮರಡ್ಡಿ ಮಲ್ಲಮ್ಮನ ಅನುಯಾಯಿಗಳಾದ ನಾವೆಲ್ಲರೂ ವೀರಶೈವ ಲಿಂಗಾಯತ ರೆಡ್ಡಿ ಎಂದೇ ನಮೂದಿಸಬೇಕು ಎಂದು ಜಿ.ಎಸ್. ಪಾಟೀಲ ಸ್ಪಷ್ಟಪಡಿಸಿದರು.

ಈ ಸಮೀಕ್ಷೆ ಕೇವಲ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಆಗಿರುವುದರಿಂದ, ಈಗಾಗಲೇ ನಾವು ಪಡೆದುಕೊಳ್ಳುತ್ತಿರುವ ಮೀಸಲಾತಿಗೆ ಯಾವುದೇ ಧಕ್ಕೆ ಆಗುವುದಿಲ್ಲ. ನಾವೆಲ್ಲರೂ ಧೈರ್ಯವಾಗಿ ನಮ್ಮ ಸಮಾಜದ ಸಂಪ್ರದಾಯ, ಸಂಸ್ಕೃತಿಯನ್ನು ರಕ್ಷಣೆ ಮಾಡಿಕೊಂಡು ಮುಂದಿನ ಜನಾಂಗಕ್ಕೆ ನೀಡಬೇಕಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಎಸ್. ಎಸ್. ಪಾಟೀಲ, ವಿಶ್ವನಾಥ ಚಿಂಚಲಿ, ಕುಮಾರಣ್ಣ ಗಡಗಿ, ಸುರೇಶ ಯಳ್ಳೂರ, ಮಂಜುನಾಥ ಭಗವತಿ, ಸಿದ್ದಣ್ಣ ಕವಲೂರ, ಭೀಮರಡ್ಡೆಪ್ಪ, ಮಹೇಶ ಗಡಗಿ, ಜಗದೀಶ ಅವರೆಡ್ಡಿ, ನಾಗರಾಜ ಚನ್ನಳ್ಳಿ ಇತರರು ಉಪಸ್ಥಿತರಿದ್ದರು.

> ಇಷ್ಟಲಿಂಗ ಪೂಜೆ ಮಾಡುತ್ತಿರುವ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರ ಭಾವಚಿತ್ರವನ್ನೇ ಅಧಿಕೃತವಾಗಿ ಬಳಕೆ ಮಾಡಬೇಕು ಎಂದು 2016ರಲ್ಲಿ ಸರಕಾರ ಆದೇಶ ಮಾಡಿದೆ. ವೀರಶೈವ ಲಿಂಗಾಯತ ರೆಡ್ಡಿ ಸಮಾಜವೂ ಇದೇ ಚಿತ್ರವನ್ನು ಅಧಿಕೃತವಾಗಿ ಬಳಕೆ ಮಾಡುತ್ತಿದೆ. ಆದರೂ ಕೆಲ ವೈಷ್ಣವ ಪರಂಪರೆಯ ಮುಖಂಡರು, ಸ್ಥಾವರ ಲಿಂಗಕ್ಕೆ ಕೈ ಮುಗಿದು ನಮಸ್ಕರಿಸುವ ಚಿತ್ರವನ್ನು ಬಳಕೆ ಮಾಡುತ್ತಿರುವುದು ಸರಿಯಲ್ಲ ಎಂದು ಜಿ.ಎಸ್. ಪಾಟೀಲ ಹೇಳಿದರು.

### ಬೆಂಬಲ ಬೆಲೆ ಯೋಜನೆಯಡಿ ಎಫ್‌ಎಕ್ಯೂ ಗುಣಮಟ್ಟದ ಭತ್ತ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ

# ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಪಾಲ್ಗೊಳ್ಳಲಿ

■ ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಭತ್ತ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಬುಧವಾರ 2025–26ನೇ ಸಾಲಿನ ಮುಂಗಾರು ಹಂಗಾಮಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಭತ್ತ ಹುಟ್ಟುವಳಿ ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜೆನ್ಸಿಯವರು ತಮ್ಮ ಸಂಸ್ಥೆಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ಪ್ರತಿ ಖರೀದಿ ಕೇಂದ್ರಕ್ಕೆ ಗ್ರೇಡರ್‌ಗಳನ್ನು ನೇಮಿಸಬೇಕು. ಜಿಲ್ಲೆಯ ಪ್ರತಿ ರೈತರಿಂದ ಎಕರೆಗೆ 25 ಕ್ವಿಂಟಲ್‌ನಂತೆ ಗರಿಷ್ಠ 50 ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಭತ್ತ ಖರೀದಿಸಲು ಹಾಗೂ ಭತ್ತ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಭತ್ತ ಖರೀದಿಸದಂತೆ



ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗ ಆಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕು. ಸರ್ಕಾರ ಬೆಂಬಲ ಬೆಲೆಯಲ್ಲಿ ಭತ್ತ ಹುಟ್ಟುವಳಿಯ ಖರೀದಿ ಕುರಿತು ರೈತರಿಗೆ ತಿಳುವಳಿಕೆ ನೀಡಲು ಕರಪತ್ರಗಳ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಹೆಚ್ಚಿನ ಸಂಖ್ಯೆಯಲ್ಲಿ ರೈತರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ರೈತರಿಂದ ಭತ್ತ ಉತ್ಪನ್ನ ನೋಂದಣಿಗೆ ಅಕ್ಟೋಬರ್ 31ರವರೆಗೆ ಹಾಗೂ ಖರೀದಿ ಕಾರ್ಯಕ್ಕೆ 1–11–2025ರಿಂದ 28–2–2026ರವರೆಗೆ ಅವಧಿಯನ್ನು ನಿಗಿಪಡಿಸಲಾಗಿದೆ. ಖರೀದಿಗೆ ಸಂಬಂಧಿಸಿದಂತೆ ನಿಗದಿಪಡಿಸಿದ ಖರೀದಿ ಏಜೆನ್ಸಿಯವರು ನೋಂದಣಿ ಕೇಂದ್ರ ತೆರೆದು ನೋಂದಣಿ ಕಾರ್ಯವನ್ನು ಕೈಗೊಳ್ಳುವ ಬಗ್ಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

ಸಭೆಯಲ್ಲಿ ಕೃಷಿ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ರಮೇಶ ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಭತ್ತ ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ ಭತ್ತ ಸಾಮಾನ್ಯ 2369/–ರೂ ಹಾಗೂ ಭತ್ತ ಗ್ರೇಡ್–ಎ 2389ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಆದೇಶದನ್ವಯ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ಮತ್ತು ನಿಗಮದ ವತಿಯಿಂದ ನೇಮಿಸಲಾಗುವ ಉಪ ಏಜೆನ್ಸಿಗಳಾದ TAPCMS/PACS/PFOs/SHGs ಖರೀದಿಸಲು ಅನುಮೋದನೆ ನೀಡಿದೆ ಎಂದು ತಿಳಿಸಿದರು.

## ಪೌರ ಕಾರ್ಮಿಕರು ಯೋಜನೆಗಳ ಲಾಭ ಪಡೆಯಲಿ



■ ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಸ್ವಚ್ಛತೆ ಮತ್ತು ಸೌಂದರ್ಯ ಹೆಚ್ಚಿಸುವಲ್ಲಿ ಪೌರ ಕಾರ್ಮಿಕರ ಕೊಡುಗೆ ಅನನ್ಯವಾಗಿದ್ದು, ಅವರ ನಿಸ್ವಾರ್ಥ ಸೇವೆ ಸದಾಕಾಲ ಸ್ಮರಣೀಯವಾಗಿದೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಮಂಗಳವಾರ ಪುರಸಭೆ ಸಭಾಂಗಣದಲ್ಲಿ ಜರುಗಿದ ಪೌರ ಕಾರ್ಮಿಕರ ದಿನಚಾರಣೆ ಹಾಗೂ ಪೌರ ಕಾರ್ಮಿಕರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪಟ್ಟಣದ ಜನತೆ ಆರೋಗ್ಯದಿಂದಿರಲು ಪೌರ ಕಾರ್ಮಿಕರ ಸೇವೆ ಕಾರಣವಾಗಿದೆ. ಅವರ ನಿಸ್ವಾರ್ಥ ಸೇವೆಯ ಪ್ರತಿಫಲವಾಗಿ ನಾವೆಲ್ಲರೂ ಇಂದು ಗೌರವದ ಬದುಕನ್ನು ಕಟ್ಟಿಕೊಂಡಿದ್ದೇವೆ. ಪೌರ ಕಾರ್ಮಿಕರ ದಿನಚಾರಣೆ ಮುಂದಿನ ದಿನಗಳಲ್ಲಿ ವಿಶೇಷ ಅರ್ಥವನ್ನು ಒದಗಿಸುವ ಮೂಲಕ ವಿಜ್ರಂಭಣೆಯಿಂದ ಆಚರಿಸಲು ಸಿದ್ಧತೆ ನಡೆಸಲಾಗುವುದು ಎಂದರು.

ಕರ್ನಾಟಕ ಸರಕಾರ ಪೌರ ಕಾರ್ಮಿಕರ ಬದುಕನ್ನು ಉಜ್ವಲಗೊಳಿಸಲು ಅನೇಕ ಮಹತ್ವಾಕಾಂಕ್ಷಿ ಯೋಜನೆಗಳನ್ನು ಜಾರಿಗೆ ತಂದಿದೆ. ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಮುಖ್ಯವಾಗಿ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನಿಡಬೇಕು. 37 ಕೋಟಿ ರೂಗಳ ವೆಚ್ಚದಲ್ಲಿ ಕಾರ್ಮಿಕರ ಮಕ್ಕಳಿಗೆ ವಸತಿ ಶಾಲೆಯನ್ನು ತರಲಾಗಿದೆ. ಪೌರ ಕಾರ್ಮಿಕರು ಈ ಯೋಜನೆಯ ಲಾಭವನ್ನು ಪಡೆದುಕೊಂಡು ತಮ್ಮ ಮಕ್ಕಳ ಉನ್ನತಿಯನ್ನು ಬಯಸಬೇಕು. ಅಲ್ಲದೆ ತಮ್ಮ ಬೇಡಿಕೆಗಳನ್ನು ಈಡೇರಿಸಲು ಸರಕಾರಕ್ಕೆ ಒತ್ತಾಯ ಮಾಡಲಾಗುವುದು ಎಂದರು.

ಕಾರ್ಯಕ್ರಮಕ್ಕೂ ಮುನ್ನ ಪೌರ ಕಾರ್ಮಿಕರು, ಪುರಸಭೆಯ ನೌಕರರು ಪಟ್ಟಣದ ಸಿದ್ದಾರೂಢ ಮಠದಿಂದ ಆಕರ್ಷಕ ಮೆರವಣಿಗೆ ನಡೆಸಿದರು. ಈ ಸಂಧರ್ಭದಲ್ಲಿ ಪೌರ ಕಾರ್ಮಿಕರ ಜೊತೆಗೆ ಮುಖ್ಯಾಧಿಕಾರಿ ರಮೇಶ ಹೊಸಮನಿ, ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ ಪಾಲ್ಗೊಂಡು ಮೆರವಣಿಗೆ ವಿಶೇಷ ಮೆರುಗು ನೀಡಿದರು. ಕಾರ್ಯಕ್ರಮದಲ್ಲಿ ಪುರಸಭೆಯ ಎಲ್ಲ ಕಾರ್ಮಿಕರಿಗೆ ಶಾಸಕ ಜಿ.ಎಸ್. ಪಾಟೀಲರು ಸನ್ಮಾನಿಸಿದರು.

ಅಧ್ಯಕ್ಷೆ ಬಸಮ್ಮ ಕೊಪ್ಪದ, ಯೂಸುಪ್ ಇಟಗಿ, ಶಫೀಕ ಮೂಗನೂರ, ಮಲ್ಲಯ್ಯ ಮಹಾಪುರುಷಮಠ, ವಿದ್ಯಾ ದೊಡ್ಡಮನಿ, ಮುಖ್ಯಾಧಿಕಾರಿ ರಮೇಶ ಹೊಸಮನಿ ಸೇರಿದಂತೆ ಪುರಸಭೆಯ ಸದಸ್ಯರು, ಸಿಬ್ಬಂದಿಗಳು, ಪೌರ ಕಾರ್ಮಿಕರು ಉಪಸ್ಥಿತರಿದ್ದರು.

## ನೂತನ ವಿದ್ಯಾರ್ಥಿ ನಿಲಯ ಕಟ್ಟಡ ಕಾಮಗಾರಿಗೆ ಸಚಿವ ಪಾಟೀಲ ಭೂಮಿ ಪೂಜೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಳಸಾಪುರ ರಸ್ತೆಯ ಚಂದಪ್ಪನವರ ಲೇಔಟ್‌ನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಕಟ್ಟಡ ಕಾಮಗಾರಿಗಳ ಭೂಮಿ ಪೂಜೆಯನ್ನು ಬುದವಾರ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ನೆರವೇರಿಸಿದರು.

ಈ ಸಂದರ್ಭದಲ್ಲಿ ಗದಗ– ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆಶೋಕ ಮಂದಾಲಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ನಗರಸಬೆ ಆಯುಕ್ತ ರಾಜಾರಾಮ ಪವಾರ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಮೆಹಬೂಬ್ ತುಂಬರಮಟ್ಟಿ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಬಸವರಾಜ ಬಳ್ಳಾರಿ ಉಪಸ್ಥಿತರಿದ್ದರು.



## ವಿವಿಧ ವಾರ್ಡ್‌ಗಳಲ್ಲಿ ಸಿ ಸಿ ರಸ್ತೆ ನಿರ್ಮಾಣಕ್ಕೆ ಚಾಲನೆ ನೀಡಿದ ಸಚಿವ ಪಾಟೀಲ



■ ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿಯ ವಿವಿಧ ವಾರ್ಡ್‌ಗಳಲ್ಲಿ ಸಿ ಸಿ ರಸ್ತೆ ನಿರ್ಮಾಣಕ್ಕೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಬುಧವಾರ ಭೂಮಿ ಪೂಜಾ ನೆರವೇರಿಸಿದರು.

ಬೆಟಗೇರಿಯ ವಾರ್ಡ್ ನಂ. 6, ವಾರ್ಡ್ ನಂ.9 ಹಾಗೂ ವಾರ್ಡ್ ನಂ. 10 ರಲ್ಲಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜಾ ಕಾರ್ಯಕ್ರಮಕ್ಕೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಭೂಮಿಪೂಜಾ ಕಾರ್ಯಕ್ರಮವನ್ನು ನೆರವೆರಿಸಿದರು.

ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ನಗರಸಭೆ ಆಯುಕ್ತ ರಾಜಾರಾಮ ಪವಾರ, ನಗರಸಭೆಯ ಆಯಾ ವಾರ್ಡ್ ಸದಸ್ಯರು ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

## ಉತ್ತಮ ವಿಚಾರಗಳಿಂದ ಉತ್ತಮ ಭವಿಷ್ಯ




■ವಿಜಯಸಾಕ್ಷಿ ಸುದ್ದಿ, ಗದಗ

ಕೆಡುಕಿನ ವಿರುದ್ಧ ಒಳಿತಿನ ಗೆಲುವು ಆಗಬೇಕು ಎನ್ನುವುದು ಎಲ್ಲ ತತ್ವಗಳ ಸಂದೇಶವಾಗಿದೆ ಎಂದು ಮನಗೂಳಿಯ ಶ್ರೀ ವಿವೇಕಾನಂದ ಸೇವಾ ಕೇಂದ್ರದ ಪೂಜ್ಯಶ್ರೀ ಮೋಕ್ಷಪ್ರಾಣ ಮಾತಾಜಿ ಅವರು ಹೇಳಿದರು. ಅವರು ನಗರದ ಎಪಿಎಂಸಿ ಆವರಣದಲ್ಲಿರುವ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಶರನ್ನವರಾತ್ರಿ ಉತ್ಸವ-2025ದ ಮೊದಲ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಧಾರ್ಮಿಕ ಇತಿಹಾಸ ಅರಿತರೆ ಪ್ರೇರಣೆ ಹೆಚ್ಚಾಗುತ್ತದೆ. ನಮ್ಮ ವಿಚಾರಗಳನ್ನು ಉತ್ತಮವಾಗಿಟ್ಟುಕೊಂಡರೆ ನಮ್ಮ ಭವಿಷ್ಯ ಉತ್ತಮವಾಗಿರುತ್ತದೆ. ಜಗನ್ಮಾತೆ ಎಲ್ಲರನ್ನೂ ಕೈ ಹಿಡಿದಿರುತ್ತಾಳೆ. ಆದರೆ, ಯಾರಿಗೆ ತಾಯಿ ಕೈ ಹಿಡಿದಿದ್ದಾಳೆ ಎನ್ನುವುದು ಅರಿವಾಗುತ್ತದೆಯೋ ಅವರೇ ಪುಣ್ಯವಂತರಾಗುತ್ತಾರೆ ಎಂದು ಹೇಳಿದರು.

ಹರಿಹರದ ಸ್ವಾಮಿ ಶಾರದೇಶಾನಂದ ಅವರು ಮಾತನಾಡಿ, ಶಾರದಾ ಮಾತೆಯ ಕೃಪಾಶಿರ್ವಾದದಿಂದ ಜಗತ್ತಿನ 150 ದೇಶಗಳಲ್ಲಿ ಶ್ರೀರಾಮಕೃಷ್ಣ ಆಶ್ರಮಗಳು ಕಾರ್ಯನಿರ್ವಹಿಸುತ್ತಿವೆ. ಮನುಷ್ಯರು ಅಹಂಕಾರ, ಕೋಪ, ತಾಪಗಳನ್ನು ತ್ಯಾಗ ಮಾಡಿದರೆ ಜೀವನದಲ್ಲಿ ನೆಮ್ಮದಿಯಾಗಿರುತ್ತಾರೆ. ನಮ್ಮ ಸಂಸ್ಕೃತಿಯು ದೂರಾಗುತ್ತಿರುವ ಇಂದಿನ ದಿನಗಳಲ್ಲಿ ಮನೆಯಲ್ಲಿ ಮಕ್ಕಳಿಗೆ ಸಂಸ್ಕಾರ ನೀಡುವುದು ಮುಖ್ಯವಾಗಿದೆ. ಜಗನ್ಮಾತೆಯು ಶುಂಭ-ನಿಶುಂಭ ಎಂಬ ರಾಕ್ಷಸರನ್ನು ಸಂಹಾರ ಮಾಡಿದಂತೆ ಬದುಕಿನಲ್ಲಿ ಎಲ್ಲವೂ ತನಗೆ ಬೇಕು, ತನ್ನದೇ ಆಗಬೇಕು ಎನ್ನುವ ಆಸೆಗಳನ್ನು ನಾವೇ ಸಂಹಾರ ಮಾಡಬೇಕಾಗಿದೆ ಎಂದು ಹೇಳಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಸ್ವಾಮಿ ಜಗನ್ನಾಥಾನಂದ ಅವರು ಮಾತನಾಡಿ, ಜಗನ್ಮಾತೆಯಲ್ಲಿ ಎಲ್ಲರೂ ಪೂರ್ಣವಾಗಿ ನಂಬಿಕೆ ಶ್ರದ್ಧೆಯನ್ನು ಇಡಬೇಕು. ಶ್ರೀರಾಮಕೃಷ್ಣರು ಕಾಳಿ ಮಾತೆಯನ್ನು ಪೂಜಿಸುತ್ತ ತಮ್ಮ ಜೀವನವನ್ನು ಪಾವನಗೊಳಿಸಿದರು. ಅದರಂತೆ ನಮ್ಮಲ್ಲಿರುವ ದುಃಖ, ದಾರಿದ್ರ್ಯಗಳು ದೂರಾಗಬೇಕಾದರೆ ಜಗನ್ಮಾತೆಯಲ್ಲಿ ನಂಬಿಕೆ ಇಡಬೇಕು ಎಂದರು. ಕಾರಟಗಿಯ ಸಂತೋಷ ಶಿಂಧೆ ಅವರಿಂದ ಆರಾತ್ರಿಕ ಮತ್ತು ಭಜನೆ ಜರುಗಿತು. ನಿವೃತ್ತ ಉಪನ್ಯಾಸಕ ಎಸ್.ಎಚ್. ದೇಶಪ್ಪನವರ ಕಾರ್ಯಕ್ರಮ ನಿರೂಪಿಸಿದರು.

### 'ಯಾನ'ದಿಂದ 'ದೂರ ಸರಿದ' ಸಾಹಿತ್ಯದ ಮೇರು ಶಿಖರಕ್ಕೆ ನುಡಿ ನಮನ

# ಶತಮಾನಕ್ಕೆ ಒಬ್ಬರು 'ಭೈರಪ್ಪ'


ನಾಡಹಬ್ಬದ ಪರ್ವಕಾಲದಲ್ಲಿಯೇ ನಾಡಿನ ಶ್ರೇಷ್ಠ ಸಾಹಿತ್ಯ ವಂಶವೃಕ್ಷದ ತಂತುವೊಂದು ಅಂತ್ಯ ಕಂಡಿದೆ. ದೇಶ ವಿದೇಶಗಳಲ್ಲಿ ಕನ್ನಡ ಹಾಗೂ ಕನ್ನಡತನದ ಸಾಹಿತ್ಯದ ಲಾಲಿತ್ಯಕ್ಕೆ ಅಂತಾರಾಷ್ಟ್ರೀಯ ಮನ್ನಣೆ ತಂದು-ಕೊಟ್ಟ ಶ್ರೇಷ್ಠ ಬರಹಗಾರ ತನ್ನ ಬೆರಗಿನ ಬರವಣಿಗೆಯ ಲೇಖನಿಗೆ ಶಾಶ್ವತ ವಿರಾಮ ನೀಡಿದ್ದಾರೆ. ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಕನ್ನಡದ ಮೊದಲ ಸರಸ್ವತಿ ಸಮ್ಮಾನ್ ಪ್ರಶಸ್ತಿಯ ಗೌರವ, ರಾಷ್ಟ್ರದ ಅತ್ಯುನ್ನತ ಗೌರವಗಳಾದ ಪದ್ಮಭೂಷಣ, ಪದ್ಮಶ್ರೀ ಹಾಗೂ ನಾಡಿನ ಉನ್ನತ ನಾಡೋಜ ಸೇರಿದಂತೆ ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿದ್ದ ಲೇಖಕ, ಚಿಂತಕ, ಜನಪ್ರಿಯ ಕಾದಂಬರಿಕಾರ ಎಸ್.ಎಲ್. ಭೈರಪ್ಪ ತಮ್ಮ ಇಹಲೋಕ ಯಾನವನ್ನು ಸಂಪನ್ನಗೊಳಿಸಿದ್ದಾರೆ.

ಭೈರಪ್ಪ 1931ರ ಆಗಸ್ಟ್ 20ರಂದು ಚನ್ನರಾಯಪಟ್ಟಣದ ಬಳಿಯ ಸಂತೆ ಶಿವರದಲ್ಲಿ ಜನಿಸಿದರು. ತಂದೆ ಲಿಂಗಣ್ಣಯ್ಯ ಹಾಗೂ ತಾಯಿ ಗೌರಮ್ಮ. ಬಾಲ್ಯದ ಶಿಕ್ಷಣವನ್ನು ತಮ್ಮ ಗ್ರಾಮ ಹಾಗೂ ಸುತ್ತಮುತ್ತಲಿನ ಊರಿನಲ್ಲಿಯೇ ಪೂರೈಸಿಕೊಂಡರು. ಭೈರಪ್ಪನವರು ಕಿತ್ತು ತಿನ್ನುವ ಬಡತನ, ಬೇಜವಾಬ್ದಾರಿ ತಂದೆ, ಪ್ಲೇಗ್ ಮಾರಿಯಿಂದ ತತ್ತರಗೊಂಡ ಪರಿಸರ ಈ ಎಲ್ಲಾ ಪ್ರತೀಕೂಲ ಸಂದರ್ಭಗಳ ನಡುವೆಯೂ ಸಣ್ಣವಯಸ್ಸಿನಿಂದಲೇ, ಅವರ 'ಗೃಹಭಂಗ' ಕಾದಂಬರಿಯಲ್ಲಿ ನಂಜಮ್ಮನ ಪಾತ್ರದಲ್ಲಿ ಕಾಣಬಹುದಾದ ತಮ್ಮ ತಾಯಿಯಲ್ಲಿದ್ದ ಧೀಮಂತಿಕೆಯನ್ನು ಮೈಗೂಡಿಸಿಕೊಂಡರು.

ವಯಸ್ಸು 11ರ ಆಸು ಪಾಸಿನಲ್ಲಿ ಅವರ ತಾಯಿಯೂ ಬಡತನ ಹಾಗೂ ಪ್ಲೇಗ್‌ಗಳಿಗೆ ಜೀವವನ್ನು ಬಿಟ್ಟುಕೊಟ್ಟಾಗ, ಬದುಕಿನ ವಿಶ್ವ ವಿಶಾಲತೆಯ ಈ ರಂಗದಲ್ಲಿ ತಮ್ಮ ಸಾಹಸಮಯವಾದ ಬದುಕನ್ನು ತಾವೇ ನಿರ್ಮಿಸಿಕೊಳ್ಳತೊಡಗಿದರು. ಪರಿಸ್ಥಿತಿ ಇಷ್ಟೊಂದು ಕಠಿಣಾತಿ ಕಠಿಣವಾಗಿದ್ದರೂ ಒಂದಿಷ್ಟು ಧೃತಿಗೆಡದ ಭೈರಪ್ಪ ಮುಂದಿನ ವಿದ್ಯಾಭ್ಯಾಸಕ್ಕಾಗಿ ಮೈಸೂರಿಗೆ ಬಂದರು. ಗೃಹಭಂಗ, ಅನ್ವೇಷಣ ಕಾದಂಬರಿಗಳು ಮತ್ತು ಭಿತ್ತಿ ಎಂಬ ಆತ್ಮಚರಿತ್ರೆಯಲ್ಲಿನ ಅವರ ಬದುಕಿನ ಈ ಭಾಗಗಳನ್ನು ಓದುವುದೇ ಒಂದು ರೋಮಾಂಚನಕಾರಿ ಅನುಭವ.

ಶುದ್ಧ ಮೌಲ್ಯಗಳ ದೃಷ್ಟಿಯಿಂದ ಗಾಂಧೀಜಿ ಒಬ್ಬರನ್ನೇ ಮಹೋನ್ನತ ನಾಯಕರೆಂದು ಪರಿಗಣಿಸುವ ಭೈರಪ್ಪನವರು ಕೇವಲ ತಮ್ಮ 13ನೇವಯಸ್ಸಿನಲ್ಲೇ ಸ್ವಾತಂತ್ರ ಚಳುವಳಿಯಲ್ಲಿ ಸಕ್ರಿಯವಾಗಿ ಭಾಗವಹಿಸಿ ಹೆಂಡದ ಲಾರಿಗಳನ್ನು ತಡೆದು ಪೊಲೀಸ್ ಸ್ಟೇಷನ್ನಿಗೆ ಹೋದರು. ಆ ಕುರಿತು ಜಾಗೃತಿ ಮೂಡಿಸುವ ಭಾಷಣಗಳನ್ನು ಮಾಡಿದವರು. ಸಿನಿಮಾ ಟೆಂಟ್‌ಲ್ಲಿ ಬಾಗಿಲು ಕಾಯುವ ಕೆಲಸದಿಂದ ಹಿಡಿದು ಅವರು ಮಾಡಿದ ಕೆಲಸ ಅನೇಕ. ಎಲ್ಲೋ ಬದುಕು ಕ್ಷುಲ್ಲತೆಯ ಕಡೆಗೆ ಸಾಗಿದೆ ಅನಿಸಿ ತಮ್ಮ ಬದುಕಿನ ಅನ್ವೇಷಣೆಯತ್ತ ಮುಖ ಮಾಡಿದರು.

ಮೈಸೂರಿನ ಹಲವು ಹಾಸ್ಟೆಲ್‌ಗಳು ಮತ್ತು ಅಂದಿನ ಕೆಲವೊಂದು ಸಜ್ಜನರ ಕೃಪೆಗಳಲ್ಲಿ ಬದುಕು ಸಾಗಿಸಿದ ಭೈರಪ್ಪನವರು ಮೈಸೂರಿನ ಶಾರದ ವಿಲಾಸ ಪ್ರೌಢಶಾಲೆಯಲ್ಲಿ ಓದಿದ ಮೇಲೆ ಮಹಾರಾಜಾ ಕಾಲೇಜಿನ ವಿದ್ಯಾರ್ಥಿಯಾಗಿ




1957ರಲ್ಲಿ ಬಿ.ಎ.ಆನರ್ಸ್ ಪದವಿ ಗಳಿಸಿದರು. 1958ರಲ್ಲಿ ಮೈಸೂರು ವಿಶ್ವವಿದ್ಯಾನಿಲಯದಿಂದ ಎಂ.ಎ ಪದವಿಯಲ್ಲಿ ಪ್ರಥಮ ಶ್ರೇಣಿಯ ಸಾಧನೆ ಮಾಡಿ ಚಿನ್ನದ ಪದಕಗಳನ್ನು ತಮ್ಮದಾಗಿಸಿಕೊಂಡರು. ಬರೋಡಾದ ಮಹಾರಾಜ ಸಯ್ಯಾಜಿರಾವ್ ವಿಶ್ವವಿದ್ಯಾನಿಲಯದಿಂದ 'ಸತ್ಯ ಮತ್ತು ಸೌಂದರ್ಯ' ಎಂಬ ಇಂಗ್ಲಿಷಿನಲ್ಲಿ ರಚಿಸಿದ ಪ್ರಬಂಧಕ್ಕಾಗಿ ಡಾಕ್ಟ-ರೇಟ್ ಪದವಿಗಳಿಸಿದರು. ಎಂ.ಎ. ವಿದ್ಯಾಭ್ಯಾಸದ ನಂತರ ಹುಬ್ಬಳ್ಳಿಯ ಕಾಡಸಿದ್ಧೇಶ್ವರ ಕಾಲೇಜಿನಲ್ಲಿ ತರ್ಕಶಾಸ್ತ್ರ ಮತ್ತು ಮನಃಶಾಸ್ತ್ರದ ಅಧ್ಯಾಪಕರಾಗಿ, ನಂತರ 1960ರಿಂದ 1966ರವರೆಗೆ ಗುಜರಾತಿನ ಸರ್ದಾರ್ ಪಟೇಲ್ ವಿಶ್ವವಿದ್ಯಾನಿಲಯದಲ್ಲಿ ತತ್ವಶಾಸ್ತ್ರದ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದರು. 1967ರಿಂದ 1971ರವರೆಗೆ ದೆಹಲಿಯ ರಾಷ್ಟ್ರೀಯ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ ಶಿಕ್ಷಣ ಮೀಮಾಂಸಾ ವಿಷಯದಲ್ಲಿ ಉಪ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ ನಂತರ ಮೈಸೂರಿನಲ್ಲಿರುವ ಪ್ರಾದೇಶಿಕ ಶಿಕ್ಷಣ ಕಾಲೇಜಿನಲ್ಲಿ ಕಾರ್ಯ ನಿರ್ವಹಿಸಿ 1991ರಲ್ಲಿ ನಿವೃತ್ತರಾದರು.

ಭೈರಪ್ಪನವರ ಕಾದಂಬರಿಗಳಲ್ಲಿ ಕಾಣುವ ಬದುಕಿನ ಪಾತ್ರಗಳು ಎಲ್ಲೆಲ್ಲೂ ನಮ್ಮ ಕಣ್ಣ ಮುಂದೆ ಕಾಣುತ್ತಿರುವ ವ್ಯಕ್ತಿಗಳ ಹಾಗೇ ಇರುತ್ತವೆ. ಇದು ಅವರ ಮಹಾಭಾರತವನ್ನು ಇಂದಿನ ಕಾಲಕ್ಕೆ ಹೊಂದಿಸಿ ನೋಡುವಂತಹ 'ಪರ್ವ' ಕಾದಂಬರಿಯಂತಹ ಪಾತ್ರಗಳಲ್ಲೂ ಕಾಣಬರುತ್ತವೆ. ಅವರ ಕಾದಂಬರಿಗಳ ಭಾಷೆಯಲ್ಲಿರುವ ಗ್ರಾಮೀಣ, ನಗರ ಮತ್ತು ಇತ್ತೀಚಿನ ಆಧುನಿಕತೆಯವರೆಗಿನ ವರಸೆಯ ಸೊಗಡುಗಳಂತೂ ನಮ್ಮನ್ನು ಅಪೂರ್ವ ರೀತಿಯಲ್ಲಿ ಹಿಡಿದಿಟ್ಟುಕೊಂಡುಕೊಂಡು ಬಿಡುತ್ತವೆ. ಈ ವಿಷಯಗಳಲ್ಲಿ ಭೈರಪ್ಪನವರಿಗೆ ಭೈರಪ್ಪನವರೇ ಸಾಟಿ.

ಭೈರಪ್ಪ ಅವರ ಅನೇಕ ಕಾದಂಬರಿಗಳು ಭಾರತೀಯ ಇತರ ಭಾಷೆಗಳು ಮತ್ತು ಇಂಗ್ಲಿಷ್‌ಗೆ ಅನುವಾದಗೊಂಡಿವೆ. ಭೈರಪ್ಪ ಕಳೆದ 25 ವರ್ಷಗಳಿಂದ ಕನ್ನಡದಲ್ಲಿ ಹೆಚ್ಚು ಮಾರಾಟವಾದ ಲೇಖಕರಲ್ಲಿ ಒಬ್ಬರಾಗಿದ್ದಾರೆ ಮತ್ತು ಅವರ ಪುಸ್ತಕಗಳ ಅನುವಾದಗಳು ಕಳೆದ ಎಂಟು ವರ್ಷಗಳಿಂದ ಮರಾಠಿಯಲ್ಲಿ ಮತ್ತು ಕಳೆದ ಐದು ವರ್ಷಗಳಿಂದ ಹಿಂದಿಯಲ್ಲಿ ಹೆಚ್ಚು ಮಾರಾಟವಾಗಿರುವದು ಗಮನಾರ್ಹ.

ಪದ್ಮಶ್ರೀ ಪ್ರಶಸ್ತಿ (ಭಾರತ ಸರ್ಕಾರ, 2013), ಪದ್ಮಭೂಷಣ ಪ್ರಶಸ್ತಿ-2023, ಸಾಹಿತ್ಯ ಅಕಾಡೆಮಿ ಫೆಲೋಶಿಪ್ (ಭಾರತ ಸರ್ಕಾರ, 2015), ರಾಷ್ಟ್ರೀಯ ಸಂಶೋಧನಾ ಪ್ರಾಧ್ಯಾಪಕ, (ಭಾರತ ಸರ್ಕಾರ, 2014), ಸರಸ್ವತಿ ಸಮ್ಮಾನ್-2010, ಸಾಹಿತ್ಯ ಅಕಾಡೆಮಿ ಪ್ರಶಸ್ತಿ (ಭಾರತ ಸರ್ಕಾರ, 1975), ಮೈಸೂರು ವಿಶ್ವವಿದ್ಯಾನಿಲಯದಿಂದ ಗೌರವ ಡಾಕ್ಟರೇಟ್ (2015), ಬೆಟಗೇರಿ ಕೃಷ್ಣಶರ್ಮ ಪ್ರಶಸ್ತಿ (2014), ವಾಗ್ವಿಲಾಸಿನಿ ಪುರಸ್ಕಾರ (ದೀನನಾಥ್ ಮೆಮೋರಿಯಲ್ ಫೌಂಡೇಶನ್, ಪುಣೆ, 2012), ನಾಡೋಜ ಪ್ರಶಸ್ತಿ (2011), ಎನ್ಟಿಆರ್ ರಾಷ್ಟ್ರೀಯ ಪ್ರಶಸ್ತಿ (2007), ಗುಲ್ಬರ್ಗ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ (2007), ಪಂಪ ಪ್ರಶಸ್ತಿ (2005), ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ (1999), ಕನ್ನಡ ಸಾಹಿತ್ಯ ಅಕಾಡೆಮಿ ಪ್ರಶಸ್ತಿ (ಕರ್ನಾಟಕ ಸರ್ಕಾರ, 1966) ಹೀಗೆ ಅನೇಕ ಪುರಸ್ಕಾರಗಳು ಅವರನ್ನು ಅರಸಿ ಬಂದಿವೆ.

ಹತ್ತು ಹಲವು ಚಿಂತನೆಗಳ ಬದುಕಿನ ರೀತಿ ಮತ್ತು ವೈರುಧ್ಯಗಳ ಸಮಾಜದಲ್ಲಿ ಭೈರಪ್ಪನವರು ಎಲ್ಲ ರೀತಿಯ ವಿಚಾರಗಳನ್ನು ಮುಕ್ತತೆ, ಸತ್ಯದ ಆಧಾರತೆ ಮತ್ತು ನಿಷ್ಠುರತೆಗಳೊಂದಿಗೆ ಮಂಡಿಸುವುದರೊಂದಿಗೆ ಹಲವು ರೀತಿಯ ಟೀಕಾಕಾರರಿಗೆ ಯಾವುದೇ ರೀತಿಯ ಸೊಪ್ಪು ಹಾಕದೆ ಸ್ಪಷ್ಟ ಉತ್ತರಗಳನ್ನೂ ನೀಡುತ್ತಾ ಸಾಗಿದ್ದರು. ಅವರು ಶತಮಾನಕ್ಕೆ ಒಬ್ಬರು. ತಮ್ಮ ಕೊನೆಯ ಉಸಿರಿನವರೆಗೂ ಕನ್ನಡ ಕನ್ನಡ ಸಾಹಿತ್ಯ ರಾಷ್ಟ್ರೀಯ ಚಿಂತನೆಗಳಿಗೆ ತಮ್ಮನ್ನು ತಮ್ಮ ಸಮರ್ಪಿಸಿಕೊಂಡ ಈ ಹಿರಿಯ ಚೇತನ ಇಂದು ಇಲ್ಲವಾಗಿರುವುದು ಸಾಹಿತ್ಯ ವಲಯದಲ್ಲಿ ಬಹುದೊಡ್ಡ ನಿರ್ವಾತವನ್ನು ಸೃಷ್ಟಿಸಿದೆ. ಹೋಗಿ ಬನ್ನಿ, ನಿಮಗಿದು ನುಡಿ ನಮನ...



**- ಈಶ್ವರ ಎಸ್.ಮೆಡ್ಲೇರಿ.**
**ಅಧ್ಯಕ್ಷರು, ಕಸಾಪ, ಲಕ್ಷ್ಮೇಶ್ವರ.**

### ಸಹಿ ಸಂಗ್ರಹಣಾ ಅಭಿಯಾನಕ್ಕೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಮತಗಳ್ಳತನ ನಿಲ್ಲಲಿ, ಪ್ರಜಾಪ್ರಭುತ್ವ ಉಳಿಯಲಿ

■ವಿಜಯಸಾಕ್ಷಿ ಸುದ್ದಿ, ರೋಣ

ಮತಗಳ ಕಳ್ಳತನದಿಂದ, ಅಧಿಕಾರ ನಡೆಸುವ ಪಕ್ಷಗಳಿಂದ ದೇಶದ ಪ್ರಜಾಪ್ರಭುತ್ವ ಉಳಿಯಲು ಸಾದ್ಯವಿಲ್ಲ. ಹೀಗಾಗಿ, ಕಾಂಗ್ರೆಸ್ ಪಕ್ಷ 'ಮತ ಕಳ್ಳತನ ನಿಲ್ಲಲಿ-ಪ್ರಜಾಪ್ರಭುತ್ವ ಉಳಿಯಲಿ' ಎಂಬ ಘೋಷವಾಕ್ಯದೊಂದಿಗೆ ಸಹಿ ಅಭಿಯಾನ ಹಮ್ಮಿಕೊಂಡಿದೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಸಹಿ ಸಂಗ್ರಹಣಾ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಂವಿಧಾನ ನಮಗೆ ಮತದಾನದ ಹಕ್ಕನ್ನು ನೀಡಿದೆ. ವಿಪರ್ಯಾಸವೆಂದರೆ, ಮತದಾನದ ಹಕ್ಕನ್ನೇ ಕಸಿದುಕೊಳ್ಳುವ ಹುನ್ನಾರ ನಡೆದಿದೆ. ಮತಗಳನ್ನೆ ಕಳ್ಳತನ ಮಾಡಿದರೆ ಸಂವಿದಾನ ಉಳಿಯಲು ಸಾಧ್ಯವೇ ಎಂದು ಪ್ರಶ್ನಿಸಿದ ಅವರು, ಪಕ್ಷದ ಮುಖಂಡರು, ಕಾರ್ಯಕರ್ತರು ಮತಕ್ಷೇತ್ರದ ಪ್ರತಿ ಮನೆಗಳಿಗೆ ತೆರಳಿ ಮಾಹಿತಿ ಸಂಗ್ರಹ ಮಾಡಬೇಕು ಎಂದರು.

ಪ್ರತಿ ಕುಟುಂಬಗಳಲ್ಲಿನ ಮತದಾರರ ಹೆಸರು, ಆಧಾರ್ ಕಾರ್ಡ್ ಸಂಖ್ಯೆ, ದೂರವಾಣಿ ಸಂಖ್ಯೆ ಹಾಗೂ ಅವರ ಸಹಿಯನ್ನು ಪಡೆದುಕೊಳ್ಳುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಬೇಕು. ಮತಗಳನ್ನು ಯಾವ ರಿತಿಯಲ್ಲಿ ಕಳ್ಳತನ ಮಾಡುತ್ತಿದ್ದಾರೆ ಎಂದು ಜನರಿಗೆ ತಿಳಿಸುವ ಜೊತೆಗೆ ಜಾಗೃತಿಯನ್ನು ಮೂಡಿಸಬೇಕು. ರೋಣ ಮತಕ್ಷೇತ್ರದಲ್ಲಿ ಒಂದೇ ದಿನ ಎಲ್ಲ ವಾರ್ಡ್‌ಗಳಲ್ಲಿ ಸಹಿ ಸಂಗ್ರಹ ಅಭಿಯಾನ ನಡೆಯಬೇಕು. ಪ್ರಜಾಪ್ರಭುತ್ವದ ಉಳಿವಿಗಾಗಿ ನಾವೆಲ್ಲರೂ ಸಿದ್ಧರಾಗಬೇಕಿದೆ ಎಂದರು.



ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರು ಮತಗಳ್ಳತನದ ಪ್ರಕರಣಗಳನ್ನು ದಾಖಲೆ ಸಮೇತ ಬಿಡುಗಡೆ ಮಾಡಿದ್ದಾರೆ. ಮಹಾರಾಷ್ಟ್ರ, ಕರ್ನಾಟಕ ಸೇರಿ ಹಲವು ರಾಜ್ಯಗಳಲ್ಲಿ ಬಿಜೆಪಿಯವರು ಯಾವ ರೀತಿಯಲ್ಲಿ ಅಧಿಕಾರ ದಕ್ಕಿಸಿಕೊಂಡಿದ್ದಾರೆ ಎನ್ನುವುದನ್ನು ದೇಶದ ಜನರಿಗೆ ತಿಳಿಸುವ ಕೆಲಸವನ್ನು ಮಾಡಿದ್ದಾರೆ. ಮತದಾರರು ಜಾಗೃತರಾಗಿ ಮತದಾನದ ಪ್ರತಿಯಲ್ಲಿ ತಮ್ಮ ಹೆಸರು ಇರುವ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಐ.ಎಸ್. ಪಾಟೀಲ, ಅಕ್ಷಯ ಪಾಟೀಲ, ವೀರಣ್ಣ ಶೆಟ್ಟರ, ಶರಣಪ್ಪ ಬೆಟಗೇರಿ, ವಿ.ಆರ್. ಗುಡಿಸಾಗರ, ಎಸ್. ಎಸ್. ಸೋಂಪುರ, ಅಶೋಕ ಬಾಗಮಾರ, ಬಸವರಾಜ ನವಲಗುಂದ, ಪರಶುರಾಮ ಅಳಗವಾಡಿ, ದಶರಥ ಗಾಣಿಗೇರ, ಯಚ್ಚರಗೌಡ ಗೋವಿಂದಗೌಡ್ರ, ದುರ್ಗಪ್ಪ ಹಿರೇಮನಿ, ಮಂಜುಳಾ ಹುಲ್ಲಣ್ಣವರ, ಮಂಜುಳಾ ರೇವಡಿ, ನಾಜಬೇಗಂ ಯಲಿಗಾರ, ರೂಪಾ ಅಂಗಡಿ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ವಿದ್ಯಾರ್ಥಿ ಸಂಘದ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ 2025-26ನೇ ಸಾಲಿನ ವಿದ್ಯಾರ್ಥಿ ಸಂಘ, ಕ್ರೀಡಾ ಸಂಘ, ಯುವ ರೆಡ್‌ಕ್ರಾಸ್ ಘಟಕ ಹಾಗೂ ಎನ್.ಎಸ್.ಎಸ್ ಚಟುವಟಿಕೆಗಳ ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.

ಕೆ.ಎಲ್.ಇ. ಸೊಸೈಟಿ ಸ್ಕೂಲ್‌ನ ಪ್ರಾಚಾರ್ಯೆ ಕಲ್ಪನಾ ಚಚಡಿ ಮಾತನಾಡಿ, ವಿದ್ಯಾರ್ಥಿಗಳು ಕಷ್ಟಪಟ್ಟು ವಿದ್ಯಾಭ್ಯಾಸ ಮಾಡಿ ಸ್ಪರ್ಧಾತ್ಮಕವಾಗಿ ಸಾಧನೆ ಮಾಡಿ ಜೀವನದಲ್ಲಿ ಮುಂದೆ ಬರಲು ಕರೆ ನೀಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯರಾದ ಭರಮಪ್ಪ ಬಡಪ್ಪವರ ಮಾತನಾಡಿ, ಜೀವನದಲ್ಲಿ ನಿಮಗೆ ಉತ್ತಮ ಇಂಜಿನಿಯರ್ ಆಗಲು ಸದಾವಕಾಶ ದೊರಕಿದೆ ಎಂದರಲ್ಲದೆ, ವಿದ್ಯಾರ್ಥಿಗಳಿಗೆ ಸರ್ಕಾರದಿಂದ ದೊರಕಬಹುದಾದ ಸೌಲಭ್ಯಗಳನ್ನು ತಿಳಿಸಿದರು

ವಿಭಾಗಾಧಿಕಾರಿಗಳಾದ ಜೈನಾಬಿ, ಕೊಟ್ರಗೌಡ, ಶಿವಾನಂದ ಪೂಜಾರ, ಮಂಗಳಗೌರಮ್ಮ ಶಿವಸಿಂಪಿಗೇರ, ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಮಂಜೂರ ಹಸನ್ ಹಾಗೂ ಕಛೇರಿ ಅಧೀಕ್ಷಕರುಗಳಾದ ವೀರೇಶ ಕಂಠಿಮಠ ಮತ್ತು ರಮೇಶ ಮಾವಿನಕಾಯಿ, ಸಮಸ್ತ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿ ಸಂಘದ ಪದಾಧಿಕಾರಿಗಳಾದ ಶ್ರೀನಿವಾಸ ಪಾಟೀಲ, ಚಂದ್ರು ಆರ್, ಕನಕರಾಯ, ಕಾರ್ತಿಕ ಶೀಲವಂತರ, ಸ್ನೇಹಾ ನರೇಗಲ್ ಮುಂತಾದವರಿದ್ದರು.

### ಸಿಎಂ ಆಗಿ ಕಾರ್ಯ ನಿರ್ವಹಿಸಲು ಸಿದ್ದರಾಮಯ್ಯ ಸಂಪೂರ್ಣ ವಿಫಲ; ಮಾಜಿ ಸಚಿವ ಅಲ್ಕೋಡ್ ಹನುಮಂತಪ್ಪ ಆರೋಪ

# ಸಿಎಂ ಸಿದ್ದರಾಮಯ್ಯ ಆತ್ಮವಂಚನೆ ಮಾಡಿಕೊಳ್ಳುತ್ತಿದ್ದಾರೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಆಡಳಿತಕ್ಕೆ ಬಂದಾಗಿನಿಂದ ಒಂದಿಲ್ಲೊಂದು ಗೊಂದಲದಲ್ಲಿಯೇ ಮುಳಗಿದ್ದು, ಮುಖ್ಯಮಂತ್ರಿಯಾಗಿ ಕಾರ್ಯ ನಿರ್ವಹಿಸಲು ಸಿದ್ದರಾಮಯ್ಯನವರು ಸಂಪೂರ್ಣ ವಿಫಲರಾಗಿದ್ದಾರೆ ಎಂದು ಮಾಜಿ ಸಚಿವ ಹನುಮಂತಪ್ಪ ಅಲ್ಕೋಡ್ ಟೀಕಿಸಿದರು.

ಲಕ್ಷ್ಮೇಶ್ವರದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಈ ಹಿಂದೆ 'ಬಿಜೆಪಿ ಸರಕಾರ ಶೇ. 40 ಭ್ರಷ್ಟಾಚಾರ' ಎನ್ನುವ ಆರೋಪ ಮಾಡಿ ಆಡಳಿತಕ್ಕೆ ಬಂದ ಕಾಂಗ್ರೆಸ್ ಪಕ್ಷ ಅದನ್ನು ಮೀರಿ ಶೇ. 60 ಭ್ರಷ್ಟಾಚಾರ ನಡೆಸುತ್ತಿದೆ. ರಾಜ್ಯದಲ್ಲಿ ದಬ್ಬಾಳಿಕೆ, ದೌರ್ಜನ್ಯ, ಭ್ರಷ್ಟಾಚಾರ ಮಿತಿಮೀರಿದ್ದು, ಜನತೆ ಇವರ ಬಗ್ಗೆ ಭ್ರಮನಿರಸನಗೊಂಡಿದ್ದಾರೆ. ರಾಜ್ಯದಲ್ಲಿ ದಲಿತರಿಗೆ ರಕ್ಷಣೆ ಇಲ್ಲ, ಜಾತಿ ತಾರತಮ್ಯ ಮಾಡುತ್ತಿದ್ದಾರೆ. ದಲಿತ ಹಾಗೂ ಮುಸ್ಲಿಮರ ಹೆಸರಲ್ಲಿ ಕಾಂಗ್ರೆಸ್‌ನವರು ರಾಜಕಾರಣ ಮಾಡುತ್ತಿದ್ದಾರೆ. ಬಿಜೆಪಿಯವರಿಗೆ ಕೋಮುವಾದಿಗಳು ಎನ್ನುತ್ತೀರಿ, ಆದರೆ ನಿಜವಾದ ಕೋಮುವಾದಿಗಳು ಕಾಂಗ್ರೆಸವರು ಎಂದು ಸರಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.



ರಾಜ್ಯದಲ್ಲಿ ಜನಗಣತಿ ಮಾಡಲು ಹೊರಟಿರುವದಕ್ಕೆ ಯಾವುದೇ ಸಿದ್ಧತೆಗಳಿಲ್ಲ, ಯಂತ್ರಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ. ಇಡೀ ರಾಜ್ಯದ ಜನತೆಯ ಸಮೀಕ್ಷೆ ಕೇವಲ 15 ದಿನಗಳಲ್ಲಿ ಮುಗಿಸುವ ತರಾತುರಿಯ ನಿರ್ಧಾರ ಏಕೆ ಎಂದು ಪ್ರಶ್ನಿಸಿದರು. ಸಿ.ಎಂ ಸಿದ್ದರಾಮಯ್ಯನವರು ಮೊದಲು ಜ್ಯಾತ್ಯಾತೀತ, ಯಾವುದೇ ಆರೋಪಗಳಿಲ್ಲದ ಒಳ್ಳೆಯ ವ್ಯಕ್ತಿಯಾಗಿದ್ದರು. ಆದರೆ ಕಾಂಗ್ರೆಸ್ ಸೇರಿದ ಮೇಲೆ ತಮ್ಮತನವನ್ನು ಮರೆತುಬಿಟ್ಟಿದ್ದಾರೆ. ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳಿಲ್ಲ. ಎಲ್ಲ ವಸ್ತುಗಳ ಬೆಲೆ ಏರಿಕೆ, ವಿರೋಧ ಪಕ್ಷದ ಶಾಸಕರಿಗೆ ಸರಿಯಾದ ಅನುದಾನ ನೀಡುತ್ತಿಲ್ಲ. ಇದರಿಂದ ರಾಜ್ಯದಲ್ಲಿ ಒಂದು ರೀತಿಯ ಅರಾಜಕತೆ ತಾಂಡವವಾಡುತ್ತಿದೆ. ನುಡಿದಂತೆ ನಡೆದಿದ್ದೇವೆ ಎನ್ನುವ ಸಿದ್ದರಾಮಯ್ಯ ಆತ್ಮವಂಚನೆ ಮಾಡಿಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಜಾಕೀರಹುಸೇನ್ ಹವಾಲ್ದಾರ ಇದ್ದರು.

### ಡಾ. ಬಿ.ಆರ್. ಅಂಬೇಡ್ಕರ್ ಅನುದಾನಿತ ಪ್ರೌಢಶಾಲೆಯ ಬಳಿ ಚರಂಡಿ ಅವಾಂತರ

# ವಿದ್ಯಾರ್ಥಿಗಳಿಗೆ ಶುದ್ಧ ವಾತಾವರಣ ಕಲ್ಪಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಕಲಾಂ ನಗರದ ಹತ್ತಿರವಿರುವ ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ವಿದ್ಯಾಸಂಸ್ಥೆಯ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅನುದಾನಿತ ಪ್ರೌಢಶಾಲೆಯ ಬಳಿ ಚರಂಡಿ ನೀರು ತುಂಬಿಕೊಳ್ಳುತ್ತಿದ್ದು, ಪುರಸಭೆ ಇದರ ಬಗ್ಗೆ ನಿರ್ಲಕ್ಷ್ಯ ಧೋರಣೆ ತಾಳುತ್ತಿರುವದಕ್ಕೆ ಅಕ್ರೋಶ ವ್ಯಕ್ತಪಡಿಸಿದ ಮಾಜಿ ಸಚಿವ ಹಾಗೂ ಸಂಸ್ಥೆಯ ಅಧ್ಯಕ್ಷ ಹನುಮಂತಪ್ಪ ಅಲ್ಕೋಡ್, ಪುರಸಭೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಘಟನೆ ಬುಧವಾರ ನಡೆದಿದೆ.

ಮುಂಜಾನೆ ಪುರಸಭೆಗೆ ಆಗಮಿಸಿದ ಹನುಮಂತಪ್ಪ ಅಲ್ಕೋಡ್, ಕಳೆದ 3-4 ವರ್ಷಗಳಿಂದ ಇಲ್ಲಿ ಚರಂಡಿ ನೀರು ಶಾಲೆಯ ಆವರಣಕ್ಕೆ ನುಗ್ಗಿ ಮಕ್ಕಳಿಗೆ ತೊಂದರೆಯಾಗುತ್ತಿದೆ. ಅದರ ವಾಸನೆಯಿಂದ ಮಕ್ಕಳು ಊಟ ಮಾಡಲು ಸಹ ಹಿಂಜರಿಯುವಂತಾಗಿದೆ.



ಈ ಗಲೀಜು ನೀರಿನಿಂದ ಶಾಲೆಯ ಮಕ್ಕಳಿಗೆ, ಶಿಕ್ಷಕರಿಗೆ ಆರೋಗ್ಯದ ಸಮಸ್ಯೆಗಳು ಹೆಚ್ಚುತ್ತಿವೆ. ಈ ಕುರಿತಂತೆ ಪುರಸಭೆಗೆ ಪದೇ ಪದೇ ಮನವಿ ಮಾಡಿದರೂ ಯಾವುದೇ ಕ್ರಮ ಕೈಗೊಳ್ಳದಿರುವದಕ್ಕೆ ಕಾರಣವೇನು ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಶಾಲೆಯಲ್ಲಿ ಮಕ್ಕಳಿಗೆ ಶುದ್ಧ ವಾತಾವರಣ ಇರಬೇಕು ಎನ್ನುವದು ಸರಕಾರದ ಇಚ್ಛೆಯಾಗಿದ್ದರೂ ಅದನ್ನು ಇಲ್ಲಿ ಸಂಪೂರ್ಣವಾಗಿ ಧಿಕ್ಕರಿಸಲಾಗಿದೆ.

ಈ ಕುರಿತಂತೆ ಪುರಸಭೆಗೆ ಸಲ್ಲಿಸಿದ ಅನೇಕ ಮನವಿಗಳಿಗೆ ಯಾವುದೇ ಸ್ಪಂದನೆ ದೊರಕಿಲ್ಲ. ಈ ಹಿಂದೆ ಗದಗ ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಇದನ್ನು ಕೂಡಲೇ ಸರಿಪಡಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದಿರುವದು ಜಿಲ್ಲಾಧಿಕಾರಿಗಳ ಆದೇಶವನ್ನು ತಿರಸ್ಕರಿಸಿದಂತಾಗಿದೆ. ಯಾವುದೇ ಕಾರಣಕ್ಕೂ ಅಲ್ಲಿನ ಸಮಸ್ಯೆ ಬಗೆಹರಿಸದ ಹೊರತು ಜಾಗ ಬಿಟ್ಟು ಕದಲುವದಿಲ್ಲ ಎಂದು ಹನುಮಂತಪ್ಪ ಅಲ್ಕೋಡ್ ಪಟ್ಟು ಹಿಡಿದರು.

ಇಲ್ಲಿನ ಚರಂಡಿ ನಿರ್ಮಾಣ ಸಂಪೂರ್ಣ ಅವೈಜ್ಞಾನಿಕವಾಗಿದ್ದು, ನೀರು ಹರಿದು ಹೋಗುವ ಮಾರ್ಗವನ್ನೇ ಸರಿಯಾಗಿ ನಿರ್ಮಿಸಿಲ್ಲ. ಸುತ್ತಮುತ್ತಲಿನಿಂದ ಚರಂಡಿ ನೀರು ಅಪಾರ ಪ್ರಮಾಣದಲ್ಲಿ ಹರಿದು ಬಂದು ಶಾಲೆಯ ಆವರಣದೊಳಗೆ ನುಗ್ಗುತ್ತಿದೆ. ಇದು ಅಧಿಕಾರಿಗಳಿಗೆ ಗೊತ್ತಿದ್ದರೂ ಕಣ್ಮುಚ್ಚಿ ಕುಳಿತುಕೊಂಡಿದ್ದಾರೆ ಎಂದು ಆರೋಪಿಸಿದ ಅವರು, ಶಾಲಾ ಮಕ್ಕಳಿಗೆ ತೊಂದರೆಯಾಗದಂತೆ ಸ್ಥಳೀಯ ಆಡಳಿತ ಕ್ರಮ ಕೈಗೊಳ್ಳಬೇಕೆಂಬ ನಿರ್ದೇಶನವಿದೆ. ಆದರೆ ಹಿಂದುಳಿದ ವರ್ಗಗಳ ಸಂಸ್ಥೆಯ ಶಾಲೆ ಇದಾಗಿದ್ದು, ಅದೇ ಉದ್ದೇಶದಿಂದ ಇದನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ನಂತರ ಪುರಸಭೆ ಆರೋಗ್ಯ ನೀರಿಕ್ಷಕ ಮಂಜುನಾಥ ಮುದಗಲ್, ಇಂಜಿನಿಯರ್ ಕಾಟೇವಾಲೆ ಹಾಗೂ ಸಿಬ್ಬಂದಿಗಳು ಮಾಜಿ ಸಚಿವರೊಂದಿಗೆ ಜಾಗೆಗೆ ತೆರಳಿ ಜೆಸಿಬಿ ಮೂಲಕ ನೀರು ಹರಿದುಹೋಗುವ ಮಾರ್ಗ ತೆರವುಗೊಳಿಸುವ ಕಾರ್ಯ ಮಾಡಿದರು. ಹೀಗೆ ತಾತ್ಕಾಲಿಕ ಉಪಶಮನ ಮಾಡುವ ಕಾರ್ಯ ಮಾಡುವದು ಬೇಡ. ಇದಕ್ಕೆ ಖಾಯಂ ಆಗಿ ಕೆಲಸ ಮಾಡುವಂತೆ ಹೇಳಿದರು. ಅದನ್ನು ಆದಷ್ಟು ಶೀಘ್ರ ಸರಿಪಡಿಸುವದಾಗಿ ಅಧಿಕಾರಿಗಳು ಮಾಜಿ ಸಚಿವರಿಗೆ ಭರವಸೆ ನೀಡಿದರು. ಈ ವೇಳೆ ಜಾಕೀರ್‌ಹುಸೇನ್ ಹವಾಲ್ದಾರ ಇದ್ದರು.

# ಗಣಕೀಕೃತ ವೇಳಾಪಟ್ಟಿಯಂತೆ ಕೌನ್ಸಿಲಿಂಗ್

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಸರಕಾರಿ ಪ್ರಾಥಮಿಕ/ ಪ್ರೌಢಶಾಲೆಗಳ ಸಹ ಶಿಕ್ಷಕರು/ಮುಖ್ಯ ಶಿಕ್ಷಕರ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಜಿಲ್ಲೆಯ ಒಳಗಿನ ಪ್ರಾಥಮಿಕ ಶಾಲಾ ಹಿರಿಯ ಮುಖ್ಯ ಶಿಕ್ಷಕರು/ ಮುಖ್ಯ ಶಿಕ್ಷಕರು/ಸಹ ಶಿಕ್ಷಕರು/ದೈಹಿಕ ಶಿಕ್ಷಕರು/ವಿಶೇಷ ಶಿಕ್ಷಕರುಗಳ ವರ್ಗಾವಣೆಯನ್ನು ಹಾಗೂ ಪ್ರೌಢಶಾಲಾ ಸಹ ಶಿಕ್ಷಕರು/ದೈಹಿಕ ಶಿಕ್ಷಣ ಶಿಕ್ಷಕರು/ವಿಶೇಷ ಶಿಕ್ಷಕರ ಕೋರಿಕೆ ವರ್ಗಾವಣೆ ಕುರಿತಂತೆ, ಪರಿಷ್ಕೃತ ವೇಳಾ ಪಟ್ಟಿಯಂತೆ ಅಂತಿಮ ಪಟ್ಟಿ ಪ್ರಕಾರ ಈ ಕೆಳಗಿನ ದಿನಾಂಕಗಳಂದು ಕೌನ್ಸಲಿಂಗ್ ನಡೆಸಲಾಗುವುದು. ಸಂಬಂಧಿಸಿದ ಶಿಕ್ಷಕರು ನಿಗದಿಪಡಿಸಿದ ದಿನಾಂಕದಂದು ಕೌನ್ಸಲಿಂಗ್ ಸಮಯದಲ್ಲಿ ಹಾಜರಿರಲು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೌನ್ಸಿಲಿಂಗ್ ನಡೆಯುವ ಸ್ಥಳ: ಸರಕಾರಿ ಪ್ರೌಢಶಾಲೆ ಸಿದ್ಧಲಿಂಗನಗರ, ಹುಡ್ಕೋ ಕಾಲೋನಿ, ಗದಗ-ಕೌನ್ಸಿಲಿಂಗ್ ಬೆಳಿಗ್ಗೆ 9.30ರಿಂದ ಪ್ರಾರಂಭವಾಗಲಿದೆ.

ಸೆಪ್ಟೆಂಬರ್ 25ರಂದು ಅಂತಿಮ ಪಟ್ಟಿಯಲ್ಲಿರುವ ಎಲ್ಲಾ ಪ್ರಾಥಮಿಕ ಹಿರಿಯ ಮುಖ್ಯ ಶಿಕ್ಷಕರು/ಮುಖ್ಯಶಿಕ್ಷಕರು ಹಾಗೂ ಪ್ರಾಥಮಿಕ ಶಾಲಾ ಸಹಶಿಕ್ಷಕರ ವೃಂದ ಕ್ರ.ಸಂ 1ರಿಂದ 300ವರೆಗೆ, ಸೆಪ್ಟೆಂಬರ್ 26ರಂದು ಪ್ರಾಥಮಿಕ ಶಾಲಾ ಸಹಶಿಕ್ಷಕರ ವೃಂದ ಕ್ರ.ಸಂ 301ರಿಂದ ಮುಕ್ತಾಯವಾಗುವವರೆಗೆ ಹಾಗೂ ಪ್ರಾಥಮಿಕ ದೈಹಿಕ ಶಿಕ್ಷಕರು/ವಿಶೇಷ ಶಿಕ್ಷಕರು, ಸೆಪ್ಟೆಂಬರ್ 29ರಂದು ಅಂತಿಮ ಪಟ್ಟಿಯಲ್ಲಿರುವ ಎಲ್ಲಾ ಪ್ರೌಢಶಾಲಾ ವಿಶೇಷ ಶಿಕ್ಷಕರು/ದೈಹಿಕ ಶಿಕ್ಷಕರು/ಸಹಶಿಕ್ಷಕರ ವೃಂದ ದವರು ಹಾಜರಾಗಬೇಕೆಂದು ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿ (ಆಡಳಿತ) ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

### ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವದ ಘಟಸ್ಥಾಪನೆ, ಶ್ರೀದೇವಿ ಪುರಾಣ ಪ್ರಾರಂಭೋತ್ಸವ


# ಶಕ್ತಿಯ ಆರಾಧನೆಯಿಂದ ಸುಖ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಶಿವನ ಅರ್ಧಾಂಗಿಯಾದ ಪಾರ್ವತಿದೇವಿಯನ್ನು ಶಕ್ತಿ ರೂಪದಲ್ಲಿ ನಾವೆಲ್ಲರೂ ಆರಾಧಿಸುವುದರಿಂದ ನಮ್ಮ ಮನೋಕಾಮನೆಗಳು ನೆರವೇರುತ್ತವೆ. ಸುಖ, ಶಾಂತಿ, ಧೈರ್ಯ, ನೆಮ್ಮದಿ, ಸಂಪತ್ತು ನಮ್ಮದಾಗುವುದರಲ್ಲಿ ಸಂಶಯವೇ ಇಲ್ಲ ಎಂದು ಶುಭ್ ಜುವೆಲರ್ಸ್ ಮಾಲೀಕರಾದ ಪೂಜಾ ಕಿರಣ ಭೂಮಾ ಹೇಳಿದರು.

ಅಖಂಡ ಭಾರತದಾದ್ಯಂತ ಶಕ್ತಿಯ ಆರಾಧನೆಯ ಪ್ರಾರಂಭದ ನಿಮಿತ್ತ ನಗರದ ಮುಳಗುಂದ ನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ 45ನೇ ವರ್ಷದ ದಸರಾ ಮಹೋತ್ಸವ, ಘಟಸ್ಥಾಪನೆ ಮತ್ತು ಶ್ರೀದೇವಿ ಪುರಾಣ ಪ್ರಾರಂಭೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನವರಾತ್ರಿ ಹಬ್ಬವು ಹಿಂದೂ ಸಂಸ್ಕೃತಿಯಲ್ಲಿ ತನ್ನದೇ ಆದ ವೈಶಿಷ್ಟ್ಯತೆಯನ್ನು ಹೊಂದಿದೆ. ನವದುರ್ಗೆಯರನ್ನು ಪೂಜಿಸುವ ಹಬ್ಬ ಇದಾಗಿದೆ. ದುಷ್ಟರನ್ನು ಶಿಕ್ಷಿಸಲು, ಶಿಷ್ಟರನ್ನು ರಕ್ಷಿಸಲು ಶಕ್ತಿ ಸ್ವರೂಪಿಣಿಯಾದ ದುರ್ಗಾದೇವಿಯು 9 ಅವತಾರಗಳನ್ನು ತಾಳುತ್ತಾಳೆ. ಅಸುರರನ್ನು ಸಂಹರಿಸಿದ ಶಕ್ತಿ ಸ್ವರೂಪಿಣಿಯೇ ದುರ್ಗಾದೇವಿ. ನವರಾತ್ರಿಯ ಒಂಬತ್ತು ದಿನಗಳಲ್ಲಿ ನವದುರ್ಗೆಯರನ್ನು ಒಂದೊಂದು ಅವತಾರದಲ್ಲಿ ಪೂಜಿಸುವ ಮೂಲಕ ನವರಾತ್ರಿ ಹಾಗೂ ದಸರಾ ಹಬ್ಬಗಳನ್ನು ಶಾಂತಿ ಮತ್ತು ಸಂಭ್ರಮದಿಂದ



ಆಚರಿಸಿ, ಶ್ರೀದೇವಿ ಹಾಗೂ ಭಗವಂತನ ಅನುಗ್ರಹ ಪಡೆದು ಪಾವನರಾಗೋಣ ಎಂದು ಹೇಳಿದರು.

ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಮಾತನಾಡಿ, ಶ್ರೀಮಠದಲ್ಲಿ ಜರುಗುವ ದೇವಿ ಪುರಾಣ ಪ್ರವಚನ ಆಲಿಸಿ ಹರ-ಗುರು-ಚರಮೂರ್ತಿಗಳ ಆಶೀರ್ವಚನ ಕೇಳಿ ಜೀವನ ಪಾವನ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಶ್ರೀಅನ್ನಪೂರ್ಣೇಶ್ವರ ಸನ್ನಿಧಿಯಲ್ಲಿ ಡಾ. ರಾಜಗುರು ಗುರುಸ್ವಾಮಿ ಕಲಕೇರಿ ಅವರಿಂದ ಪುರಾಣ ಪ್ರವಚನ ನಡೆಯಿತು. ಚನ್ನಬಸಯ್ಯ ಶಾಸ್ತ್ರಿಗಳು ಹೇಮಗಿರಿಮಠ ಪುರಾಣ ಪಠಿಸಿದರು. ಪಕ್ರುಸಾಬ ಮುಲ್ಲಾ, ಜಗನ್ನಾಥ ಕಲಬುರಗಿ, ಶರಣಕುಮಾರ ಗುತ್ತರಗಿ, ಎಸ್.ಬಿ. ಭಜಂತ್ರಿ ಸಂಗೀತ ಸೇವೆ ನೀಡಿದರು.

ದತ್ತಾ ಪ್ರಾಪರ್ಟಿಸ್ ವ್ಯವಸ್ಥಾಪಕ ನಿರ್ದೇಶಕರಾದ ಕಿರಣ ಪ್ರಕಾಶ ಭೂಮಾ, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಭಾಗ್ಯಶ್ರೀ ಕುರಡಗಿ, ಗಂಗಾಧರ ಗಡ್ಡಿ, ಭಾಗ್ಯಶ್ರೀ ಗಡ್ಡಿ, ರಾಜ್ಯ ಸರಕಾರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ಲಲಿತಾ ಅಸೂಟಿ, ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷ ಎಸ್.ಪಿ. ಸಂಶಿಮಠ, ಅಧ್ಯಕ್ಷರಾದ ಸದಾಶಿವಯ್ಯ ಮದರಿಮಠ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ, ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು. ಸಮಾರಂಭದಲ್ಲಿ ವಿವಿಧ ಭಕ್ತಿಸೇವೆ ವಹಿಸಿದ್ದ ಗಣ್ಯರನ್ನು ಸನ್ಮಾನಿಸಲಾಯಿತು. ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ ಸ್ವಾಗತಿಸಿದರು. ಸಹಕಾರ್ಯದರ್ಶಿ ಗುರುಬಸವಲಿಂಗ ತಡಸದ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಿಳಾ ಸಮಿತಿಯ ಕಾರ್ಯದರ್ಶಿ ಗೀತಾ ಹೂಗಾರ ವಂದಿಸಿದರು.

ಸಾನ್ನಿಧ್ಯ ವಹಿಸಿದ್ದ ಮಣಕವಾಡ ಅನ್ನದಾನೀಶ್ವರ ದೇವಮಂದಿರ ಮಹಾಮಠದ ಶೀಗುರು ಅಭಿನವ ಮೃತ್ಯುಂಜಯ ಸ್ವಾಮೀಜಿ ಮಾತನಾಡಿ, ಅರ್ಧನಾರೀಶ್ವರ ಪರಶಿವನೂ ಸಹ ಶಕ್ತಿದೇವತೆ ಮಹಿಮೆಯನ್ನು ಭೂಲೋಕದಲ್ಲಿ ಅವತರಿಸಲು ಪ್ರೇರಣೆ ನೀಡಿದನು. ಕಾಳಿಯ ಆರಾಧಕರಾದ ರಾಮಕೃಷ್ಣ ಪರಮಹಂಸರು ಶಕ್ತಿಯನ್ನು ಪೂಜಿಸುತ್ತಾ, ತಾವೇ ಶಕ್ತಿಯ ಸ್ವರೂಪವಾಗುತ್ತಿದ್ದರು. ನಾವೆಲ್ಲರೂ ಶ್ರದ್ಧಾಭಕ್ತಿಯಿಂದ ಶಕ್ತಿಯನ್ನು ಆರಾಧಿಸುವವರೇ ಆಗಿರುವುದರಿಂದ ನಮಗೆ ಯಾವುದೇ ತೊಂದರೆಗಳು ಜೀವನದಲ್ಲಿ ಬರುವುದಿಲ್ಲ ಎಂದು ಹೇಳಿದರು.

# ಬಿಂಕದಕಟ್ಟಿ - ಮಲ್ಲಸಮುದ್ರ ರಸ್ತೆ ಕಾಮಗಾರಿಗೆ ಚಾಲನೆ



■ವಿಜಯಸಾಕ್ಷಿ ಸುದ್ದಿ, ಗದಗ

ಬಿಂಕದಕಟ್ಟಿ, ಅಸುಂಡಿ ಮಲ್ಲಸಮುದ್ರದವರೆಗೆ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜಾ ಕಾರ್ಯಕ್ರಮವನ್ನು ಬುದವಾರದಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ನೆರವೇರಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ಅಸುಂಡಿ ಗ್ರಾಮ ಪಂಚಾಯತ್ ಅಧ್ಯಕ್ಷ ಅಲ್ತಾಪ್ ಕಾಗದಗಾರ, ಅಭಿವೃದ್ಧಿ ಅಧಿಕಾರಿ ಸೇರಿದಂತೆ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

# ಧಾರ್ಮಿಕ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದ ನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ, ಘಟಸ್ಥಾಪನೆ ಮತ್ತು ಶ್ರೀದೇವಿ ಪುರಾಣ ಪಠಣ ಕಾರ್ಯಕ್ರಮದ ಧಾರ್ಮಿಕ ಕಾರ್ಯಕ್ರಮ ಸೆ. 24ರಂದು ಸಂಜೆ 6.30 ಗಂಟೆಗೆ ಜರುಗಲಿದೆ. ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ ಸಮ್ಮುಖ ವಹಿಸುವರು. ಗದಗ ಜಿಲ್ಲಾ ಕ್ಷತ್ರಿಯ ಸಮಾಜದ ಅಧ್ಯಕ್ಷ ಶ್ರೀಕಾಂತ ಖಟವಟೆ, ಜಯಶ್ರೀ ಶ್ರೀಕಾಂತ ಖಟವಟೆ, ಗಣ್ಯ ಉದ್ದಿಮೆದಾರರಾದ ಬಸವರಾಜ ಬಂಗಾರಶೆಟ್ರ, ಕಿರಣ ಬಾಬಾಸಾ ಭಾಂಡಗೆ, ಅಶ್ವಿನಿ ಕಿರಣ ಭಾಂಡಗೆ, ಅಂಬಾಸಾ ಮೋಹನಲಾಲಸಾ ಖಟವಟೆ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

# ಸಮರ್ಪಕ ನೀರು ಪೂರೈಕೆಗೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಯಾವುದೇ ವಾರ್ಡ್‌ಗಳಿಗೆ ಸರಿಯಾಗಿ ನೀರು ಪೂರೈಕೆಯಾಗುತ್ತಿಲ್ಲ. ಇದನ್ನು ಸರಿಪಡಿಸದಿದ್ದರೆ ಧರಣಿ ನಡೆಸುವದಾಗಿ ಪಟ್ಟಣದ 19 ಮತ್ತು 14ನೇ ವಾರ್ಡ್‌ಗಳ ಸಾರ್ವಜನಿಕರು ಬುಧವಾರ ಏಕಾಏಕಿ ಪುರಸಭೆಗೆ ದೌಡಾಯಿಸಿ ಅಧಿಕಾರಿಗಳಿಗೆ ನೀರು ಪೂರೈಸುವಂತೆ ಆಗ್ರಹಿಸಿದರು.

ನಿತ್ಯದ ಜೀವನಕ್ಕೆ ಅವಶ್ಯವಿರುವಷ್ಟು ಸಹ ನೀರು ಬಿಡುತ್ತಿಲ್ಲ. ಇದರಿಂದಾಗಿ ತೊಂದರೆ ಆಗುತ್ತಿದ್ದು, ಸರಿಯಾದ ಸಮಯಕ್ಕೆ ಸಾಕಾಗುವಷ್ಟು ನೀರು ಬಿಡಬೇಕು. ಪುರಸಭೆ ಸಿಬ್ಬಂದಿ 20-25 ದಿನಗಳಿಗೊಮ್ಮೆ ನೀರು ಬಿಡುತ್ತಾರೆ.

ಈ ಕುರಿತು ಅನೇಕ ಬಾರಿ ಅಧಿಕಾರಿಗಳಿಗೆ ಹೇಳಿದರೂ ಯಾವುದೇ ಪ್ರಯೋಜನ ಆಗಿಲ್ಲ ಎಂದು ನಿವಾಸಿಗಳು ಆಕ್ರೋಶ ಹೊರ ಹಾಕಿದರು.

ನೀರು ದೊರೆಯದೆ ಇರುವದರಿಂದ ನಾವು ಬೇರೆ ಓಣಿಗೆ ಹೋಗಿ ನೀರು ತರಬೇಕಾಗಿದೆ ಎಂದು ನೀಲಮ್ಮ ಪಾಟೀಲ, ಈರಮ್ಮ ಜಗಲಿ, ರೇಣುಕಾ ಪಾಟೀಲ ಅಳಲು ತೋಡಿಕೊಂಡರು.

ಸರಿಯಾಗಿ ನೀರು ಬಿಡದಿದ್ದರೆ ಖಾಲಿ ಕೊಡ ತಂದು ಪುರಸಭೆಗೆ ಎದುರು ಪ್ರತಿಭಟನೆ ಮಾಡುತ್ತೇವೆ ಎಂದು ಪ್ರವೀಣ ಸಾಲಿ, ಹನಮಂತಪ್ಪ, ಚನ್ನಪ್ಪ ಬಳಗನೂರ, ರುದ್ರಗೌಡ ಪಾಟೀಲ ಎಚ್ಚರಿಸಿದರು.

ನೀರು ಪೂರೈಕೆಯ ಉಸ್ತುವಾರಿ ನೋಡಿಕೊಳ್ಳುತ್ತಿರುವ ಪರಶುರಾಮ ಮುಳಗುಂದ ನಿವಾಸಿಗಳನ್ನು ಸಮಾಧಾನಪಡಿಸಿ ನೀರು ಬಿಡುವಂತೆ ಸಿಬ್ಬಂದಿಗೆ ಸೂಚಿಸಿದ ನಂತರ ನಿವಾಸಿಗಳು ಅಲ್ಲಿಂದ ತೆರಳಿದರು.

# ವಿಶೇಷಚೇತನರು ಮುಖ್ಯವಾಹಿನಿಗೆ ಬರಲಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಶೇಷಚೇತನ ಮಕ್ಕಳು ಸಾಮಾನ್ಯ ಮಕ್ಕಳಾಗುವಲ್ಲಿ ನಮ್ಮೆಲ್ಲರ ಪ್ರಯತ್ನ ನಿರಂತರವಾಗಿ ಇರಬೇಕು. ಇಂತಹ ಮಕ್ಕಳನ್ನು ಕಾಳಜಿಯಿಂದ ಆರೈಕೆ ಮಾಡುವ ತಂದೆ-ತಾಯಿಗಳೊಂದಿಗೆ ಸಮಾಜವು ಕೈಜೋಡಿಸಿ ಮಕ್ಕಳನ್ನು ಮುಖ್ಯವಾಹಿನಿಗೆ ತರಲು ಮುಂದಾಗೋಣ ಎಂದು ಗದಗ ಜಯೇಂಟ್ಸ್ ಗ್ರುಪ್ಸ್ ಆಫ್ ಸಖಿ-ಸಹೇಲಿಯ ಅಧ್ಯಕ್ಷೆ ಸುಮಾ ಪಾಟೀಲ ಹೇಳಿದರು.

ಅವರು ಇತ್ತೀಚೆಗೆ ನಗರದ ಸರ್ಕಾರಿ ಶಾಲೆಯ ವಿಶೇಷಚೇತನ ಮಕ್ಕಳಿಗೆ ಸಖಿ-ಸಹೇಲಿಯ ಸಪ್ತಾಹದ ಅಂಗವಾಗಿ ಏರ್ಪಡಿಸಿದ್ದ ಕಲಿಕಾ ಸಾಮಗ್ರಿಗಳ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ವಿಶೇಷ ಮಕ್ಕಳು ಸಂಪೂರ್ಣವಾಗಿ ನಿಶ್ಯಕ್ತರಲ್ಲ. ಅವರಲ್ಲಿಯೂ ಕೆಲವು ಮಕ್ಕಳು ಸಾಧಕರಿದ್ದಾರೆ, ಇಂತಹ ಮಕ್ಕಳಂತೆ ಉಳಿದವರೂ ಆಗಬೇಕು. ಇದಕ್ಕೆ ಎಲ್ಲರ ಸಹಕಾರ ಅಗತ್ಯ ಎಂದರು.

ಸಂಘಟನೆಯ ಕಾರ್ಯದರ್ಶಿ ಅಶ್ವಿನಿ ಮಾದಗುಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಚಂದ್ರಕಲಾ ಸ್ಥಾವರಮಠ ಸ್ವಾಗತಿಸಿದರು. ಶಾಂತಾ ತುಪ್ಪದ ನಿರೂಪಿಸಿದರು, ರೇಖಾ ರೊಟ್ಟಿ ವಂದಿಸಿದರು. ಕಾರ್ಯಕ್ರಮದಲ್ಲಿ ಶಶಿಕಲಾ ಮಾಲಿಪಾಟೀಲ, ಹೇಮಾ ಪೊಂಗಾಲಿಯಾ, ಸುಷ್ಮಿತಾ ವೇರ್ಣೆಕರ, ಶ್ರೀದೇವಿ ಮಹೇಂದ್ರಕರ ಸೇರಿದಂತೆ ಸಂಘಟನೆಯ ಸದಸ್ಯರು ಉಪಸ್ಥಿತರಿದ್ದರು.

# ಪೋಷಣ ಮಾಸಾಚರಣೆ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಅಂಚೆ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಹಾಗೂ ಶಿಶು ಅಭಿವೃದ್ಧಿ ಯೋಜನೆ ಗದಗ ಇವರ ಸಂಯುಕ್ತಾಶ್ರಯದಲ್ಲಿ ಗದಗ ತಾಲೂಕಿನ ಪೇಟೆ ವೀರಭದ್ರೇಶ್ವರ ಸಮುದಾಯ ಭವನದಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಶೈಲಜಾ ವಿನಾಯಕ ಮಾನ್ವಿ ಉದ್ಘಾಟಿಸಿದರು. ಮ.ಮ.ಅ.ಇ ನಿರೂಪಣಾಧಿಕಾರಿ ರಾಧಾ ಜಿ.ಮಣ್ಣೂರ ಮಾತನಾಡಿ, ಪೋಷಣ ಮಾಸಾಚರಣೆ-2025ರ ಮುಖ್ಯ ವಿಷಯಗಳ ಕುರಿತು ಮಾಹಿತಿ ನೀಡಿದರು. ವೈದ್ಯಾಧಿಕಾರಿ ಮೆಹರೋಶ ಮುಲ್ಲಾ ಸ್ಥಳಿಯ ಪ್ರಾಥಮಿಕ ಆರೋಗ್ಯ ಕೇಂದ್ರದ ಬಗ್ಗೆ ಮಾಹಿತಿ ನೀಡಿದರು. ಅಂಚೆ ಕಛೇರಿಯ ಶಿವರಾಜ ಎ.ಕೆ, ಅಂಚೆ ಕಛೇರಿಯಲ್ಲಿ 0ರಿಂದ 6 ವರ್ಷದ ಮಕ್ಕಳಿಗೆ ಉಚಿತವಾಗಿ ಬಾಲ ಆಧಾರ್ ಕಾರ್ಡ್ ಮಾಡಿಕೊಡುತ್ತಿರುವ ಮಾಹಿತಿಯನ್ನು ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ ಮಾತನಾಡಿ, ಪೌಷ್ಠಿಕ ಆಹಾರವನ್ನು ಮಕ್ಕಳು, ಗರ್ಭಿಣಿ, ಬಾಣಂತಿಯರು ಸರಿಯಾಗಿ ಸೇವಿಸಬೇಕು ಹಾಗೂ ಅದರ ಮಹತ್ವದ ಬಗ್ಗೆ ವಿವರಿಸಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಚ್. ಎಸ್ ಜೋಗೇರ, ಪೋಷಣ ಜಿಲ್ಲಾ ಸಂಯೋಜಕಿ ಸಂಗೀತಾ ಹೂಗಾರ, ಪೋಷಣ ಜಿಲ್ಲಾ ಕಾರ್ಯಕ್ರಮ ಸಹಾಯಕರಾದ ಪವನ ಕಾಟೀಗರ, ಆರೋಗ್ಯ-ಕುಟುಂಬ ಕಲ್ಯಾಣ ಇಲಾಖೆ ಸಿಬ್ಬಂದಿಗಳು, ಗದಗ 2 ವಲಯದ ಎಲ್ಲ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಗರ್ಭಿಣಿಯರು, ತಾಯಂದಿರು, ಮಕ್ಕಳು ಭಾಗವಹಿಸಿದ್ದರು.

ಸುಜಾತಾ ಹಾವನೂರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಅಂಗನವಾಡಿ ಕಾರ್ಯಕರ್ತೆ ಶ್ರೀಮತಿ ಪತ್ತಾರ ಪ್ರಾರ್ಥಿಸಿದರು. ಸುಜಾತಾ ಹಾವನೂರ ವಂದಿಸಿದರು.

### ಪಿ.ಎಂ.ಎಫ್.ಎಂ.ಇ ಜಿಲ್ಲಾ ಮಟ್ಟದ ಅರಿವು ಕಾರ್ಯಕ್ರಮದಲ್ಲಿ ರಾಮಣ್ಣ ಹೂವಣ್ಣವರ

# ರೈತರು ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಆರ್ಥಿಕತೆಗೆ ಬೆನ್ನೆಲುಬಾಗಿರುವ ರೈತರು ಸರಕಾರದ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕೆಂದು ಜಿಲ್ಲಾ ಕೃಷಿಕ ಸಮಾಜದ ಉಪಾಧ್ಯಕ್ಷ ರಾಮಣ್ಣ ಹೂವಣ್ಣವರ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕೃಷಿ ಇಲಾಖೆ, ಗದಗ, ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ (ಆತ್ಮ), ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ (ಓಒಇಔ), ಕೆಪೆಕ್ ಲಿಮಿಟೆಡ್ ಬೆಂಗಳೂರು ಇವರ ಜಂಟಿ ಸಹಯೋಗದಲ್ಲಿ ಪಿ.ಎಂ.ಎಫ್.ಎಂ.ಇ ಜಿಲ್ಲಾ ಮಟ್ಟದ ಅರಿವು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಧುನಿಕ ಕಾಲಕ್ಕೆ ತಕ್ಕಂತೆ ರೈತರು ಹೊಂದಿಕೊಂಡು ಅವಿಷ್ಕಾರಗೊಂಡ ಹಲವು ತಂತ್ರಜ್ಞಾನಗಳೊಂದಿಗೆ ಮುನ್ನಡೆಯಬೇಕಾಗಿದೆ. ಇದಕ್ಕೆ ಸರಕಾರ ಹಲವು ಯೋಜನೆಗಳನ್ನು ಹಮ್ಮಿಕೊಂಡಿದ್ದು, ಅವುಗಳ ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಉಪ ಕೃಷಿ ನಿರ್ದೇಶಕಿ ಸ್ಫೂರ್ತಿ ಜಿ.ಎಸ್ ಮಾತನಾಡುತ್ತಾ, ಪ್ರಸಕ್ತ ವರ್ಷವು ಯೋಜನೆಯ ಅನುಷ್ಠಾನದ ಕೊನೆಯ ವರ್ಷವಾಗಿದ್ದು, ಜಿಲ್ಲೆಗೆ 200 ಘಟಕಗಳ ಗುರಿ ಇದೆ. ಈವರೆಗೆ 20 ಘಟಕಗಳಿಗೆ ಮಾತ್ರ ಸಾಲ ಮಂಜೂರಾತಿಯಾಗಿದ್ದು, ಆಸಕ್ತಿದಾರರು ಯೋಜನೆಯಡಿ ಅರ್ಜಿ ಸಲ್ಲಿಸಲು ತಿಳಿಸಿದರು.

ಜಿ.ಪಂ ಉಪ ಕಾರ್ಯದರ್ಶಿ ಸಿ.ಅರ್. ಮುಂಡರಗಿ ಮಾತನಾಡಿ, ರೈತರು ಮಾರುಕಟ್ಟೆಯ ಬೇಡಿಕೆಗನುಗುಣವಾಗಿ ಬೆಳೆ ಬೆಳೆಯಲು ಹಾಗೂ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆಯಿಂದ ಆರ್ಥಿಕ ಪ್ರಗತಿ ಸಾಧಿಸಬೇಕೆಂದು ಸಲಹೆ ನೀಡಿದರು.

ಬೆಂಗಳೂರಿನ ಕೆಪೆಕ್ ಖಕಒಗ ಘಟಕದ ಸಲಹೆಗಾರರಾದ ವಿಷ್ಣೇಶ ಅವರು ಯೋಜನೆಯ ಕುರಿತು ವಿವರವಾಗಿ ತಿಳಿಸಿದರು. ಕಾರ್ಯಕ್ರಮದ ಅಂಗವಾಗಿ



ಏರ್ಪಡಿಸಲಾದ ವಸ್ತು ಪ್ರದರ್ಶನದಲ್ಲಿ, ಕಒಈಒಇ ಯೋಜನೆಯಡಿಯ ಫಲಾನುಭವಿಗಳು, ತಮ್ಮ ಉದ್ದಿಮೆಯಲ್ಲಿ ತಯಾರಿಸಿದ ಗಾಣದ ಎಣ್ಣೆ, ಅವಲಕ್ಕಿ, ಖಾರದಪುಡಿ, ಖಡಕ್ ರೊಟ್ಟಿ, ಶೇಂಗಾ ಚಟ್ನಿ, ವಿವಿಧ ಸಿಹಿ ತಿನಿಸುಗಳು ಸೇರಿದಂತೆ ಹಲವು ಆಹಾರ ಉತ್ಪನ್ನಗಳನ್ನು ಪ್ರದರ್ಶಿಸಿದರು. ಯಶಸ್ವಿ ಫಲಾನುಭವಿಗಳಾದ ಮುಳುಗುಂದದ ರಾಜೇಶ್ವರಿ ಬಡ್ನಿ, ಮಲ್ಲಸಮುದ್ರದ ಅನ್ನಪೂರ್ಣೇಶ್ವರಿ ಏಲಿ, ಮುಂಡರಗಿಯ ವಾಸುದೇವ ಇಲ್ಲೂರು ಹಾಗೂ ಕುರಹಟ್ಟಿಯ ರಾಮನಗೌಡ ಪಾಟೀಲ ಈ ಯೋಜನೆಯಡಿ ಲಾಭಪಡೆದು ಯಶಸ್ವಿಯಾದ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಶಾರದಾ, ಶೃತಿ, ಹಾಗೂ ಪ್ರವೀಣ ಇವರಿಗೆ ಯೋಜನೆಯಡಿ ಕೆ.ವಿ.ಜಿ.ಬಿ ಬ್ಯಾಂಕಿನಿಂದ ಸಾಲ ಮಂಜೂರಾತಿ ಪತ್ರವನ್ನು ಸಂತೋಷ ಮಾಲನಹಳ್ಳಿ ನೀಡಿದರು. ಗದಗ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳ ಪ್ರತಿನಿಧಿಗಳಾಗಿ ಗಿರೀಶ ಕುಮಾರ, ಸಂತೋಷ ಜವಳಿ ಹಾಗೂ ಜಯಶ್ರೀ ಹಿರೇಮಠ ಮಾತನಾಡಿದರು.

ತಾಂತ್ರಿಕ ಅಧಿಕಾರಿ ಸಿದ್ದೇಶ ಮಾತನಾಡಿದರು. ಸಭೆಯಲ್ಲಿ ಪಶು ಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಹುಲುಗಣ್ಣನವರ, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಶಶಿಕಾಂತ ಕೋಟಿಮನಿ, ರೇಷ್ಮೆ ಇಲಾಖೆಯ ಉಪ ನಿರ್ದೇಶಕ ಕೈಲಾಸ ಮೂರ್ತಿ, ವಾರ್ತಾ ಇಲಾಖೆಯ ವಸಂತ ಮಡ್ಲೂರ, ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಕುಬೇರರೆಡ್ಡಿ ನೀಲಣ್ಣವರ ಮುಂತಾದವರು ಉಪಸ್ಥಿತರಿದ್ದರು. ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ಜಿ.ಎಚ್ ತಾರಾಮಣಿ ಸ್ವಾಗತಿಸಿದರು. ಸಹಾಯಕ ಕೃಷಿ ನಿರ್ದೇಶಕಿ (ರೈ.ಮ) ಸೀಮಾ ಸವಣೂರು ಕಾರ್ಯಕ್ರಮ ನಿರೂಪಿಸಿದರು.

ಅಪರ ಜಿಲ್ಲಾಧಿಕಾರಿ ದುರ್ಗೇಶ ಕೆ.ಆರ್ ಮಾತನಾಡಿ, ಜಿಲ್ಲೆಯ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಅಭಿವೃದ್ಧಿಗೆ ಪೂರಕವಾಗಿ ಪ್ರಧಾನ ಮಂತ್ರಿಗಳ ಕಿರುಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ (ಕಒಈಒಇ) ಯೋಜನೆಯಡಿ ಹೊಸ ಆಹಾರ ಸಂಸ್ಕರಣಾ ಉದ್ದಿಮೆ ಪ್ರಾರಂಭಿಸಲು ಹಾಗೂ ಚಾಲ್ತಿಯಲ್ಲಿರುವ ಉದ್ದಿಮೆಗಳನ್ನು ವಿಸ್ತರಿಸಲು ಗರಿಷ್ಠ 15 ಲಕ್ಷದವರೆಗೆ ಶೇ. 50ರಷ್ಟು ಸಹಾಯಧನ ಲಭ್ಯವಿದ್ದು, ಸಾರ್ವಜನಿಕರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

**ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಸಭೆಯಲ್ಲಿ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ರೂಡಗಿ ಅಭಿಮತ**

# ಅಭಿವೃದ್ಧಿಯ ವಿಷಯದಲ್ಲಿ ರಾಜಕೀಯ ಸಲ್ಲದು

**■ವಿಜಯಸಾಕ್ಷಿ ಸುದ್ದಿ, ರೋಣ**

ಸರಕಾರ ನಡೆಸುತ್ತಿರುವ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಗಣತಿಯಲ್ಲಿ ಬಣಜಿಗರು ಧರ್ಮದ ಕಾಲಂನಲ್ಲಿ ಲಿಂಗಾಯತ ಎಂದು ನಮೂದಿಸಬೇಕು. ಬಣಜಿಗರು ಬಸವಣ್ಣನವರ ಅನುಯಾಯಿಗಳಾಗಿದ್ದು, ನಮ್ಮ ಧರ್ಮ ಲಿಂಗಾಯತ ಆಗಿದೆ ಎಂದು ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ರೂಡಗಿ ಹೇಳಿದರು.

ಅವರು ಬುಧವಾರ ಪಟ್ಟಣದ ಗುರುಭವನದಲ್ಲಿ ಜರುಗಿದ ರೋಣ ತಾಲೂಕಾ ಬಣಜಿಗ ಕ್ಷೇಮಾಭಿವೃದ್ಧಿ ಸಂಘ, ತಾಲೂಕಾ ಪತ್ತಿನ ಸಹಕಾರಿ ಸಂಘದ 31ನೇ ವಾರ್ಷಿಕ ಸರ್ವ ಸಾಧಾರಣ ಸಭೆ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಬಣಜಿಗ ಸಮುದಾಯ ಕಾಯಕದಲ್ಲಿ ನಂಬಿಕೆಯನ್ನು ಹೊಂದಿದ್ದು, ಕಾಯಕ ಮಾಡುವ ಮೂಲಕ ತಮ್ಮ ದೈನಂದಿನ ಜೀವನವನ್ನು ನಿರ್ವಹಿಸುತ್ತಾರೆ. ಬಸವಣ್ಣ ಕೂಡ ಕಾಯಕವೇ ಕೈಲಾಸ ಎಂದು ಸಾರಿದ್ದು, ಅವರ ಸಂದೇಶದಂತೆ ಬಣಜಿಗ ಸಮಾಜ ನಡೆಯುತ್ತಾ ಬಂದಿದ್ದಾರೆ. ರಾಜ್ಯಾದ್ಯಾಂತ ಬಣಜಿಗ ಸಮುದಾಯ ಧರ್ಮ ಕಾಲಂನಲ್ಲಿ ಲಿಂಗಾಯತ, ಜಾತಿ ಕಾಲಂನಲ್ಲಿ ಬಣಜಿಗ ಎಂದು ಬರೆಸುವ ಮೂಲಕ ಬಸವ ತತ್ವಗಳನ್ನು ಉಳಿಸಬೇಕು ಎಂದರು.

ಈಗಾಗಲೇ ರಾಜ್ಯಾದ್ಯಾಂತ ಎಲ್ಲ ಜಿಲ್ಲೆಗಳ ಹಾಗೂ ತಾಲೂಕಿನಲ್ಲಿರುವ ಸಮಾಜದ ಮುಖಂಡರು ಲಿಂಗಾಯತ ಧರ್ಮ ಎಂದು ನಮೂದಿಸಲು ನಿರ್ಣಯ ಕೈಗೊಳ್ಳುವ ಕುರಿತು ಕರಪತ್ರಗಳನ್ನು ಹಂಚಿಕೆ ಮಾಡಿದ್ದಾರೆ. ಬಣಜಿಗ ಸಮುದಾಯ ಜಾಗೃತಿಗೊಳ್ಳಬೇಕು. ಮುಖ್ಯವಾಗಿ ನಮ್ಮ ಧರ್ಮ ಲಿಂಗಾಯತ ಆಗಿದೆ ಎನ್ನುವುದನ್ನು ನಾವು ಹೆಮ್ಮೆಯಿಂದ ಹೇಳಬೇಕು. ಸಮಾಜದ ಬಂಧುಗಳು ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ ಮುಖ್ಯವಾಹಿನಿಗೆ ತರಬೇಕು ಎಂದು ತಮ್ಮ ಆಶಯ ವ್ಯಕ್ತಪಡಿಸಿದರು.

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಸಮಾಜದ ಅಭಿವೃದ್ಧಿ ವಿಷಯದಲ್ಲಿ ಎಂದಿಗೂ ರಾಜಕಾರಣ ಮಾಡಬಾರದು. ಕಲ್ಯಾಣ ಮಂಟಪ ನಿರ್ಮಾಣಕ್ಕೆ ನಾನೊಬ್ಬನೇ ಅನುದಾನ ನೀಡಿಲ್ಲ. ಬದಲಾಗಿ ಶಿವಕುಮಾರ ಉದಾಸಿ, ಎಸ್.ವಿ. ಸಂಕನೂರ, ಕಳಕಪ್ಪ ಬಂಡಿ ಎಲ್ಲರೂ ತಮ್ಮ ಅಧಿಕಾರಾವಧಿಯಲ್ಲಿ ಅನುದಾನವನ್ನು ಕೊಟ್ಟಿದ್ದಾರೆ. ಸಮಾಜದ ಬಂಧುಗಳು ರಾಜಕೀಯ ಬಿಟ್ಟು ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದರು.

> ಬಣಜಿಗ ಸಮುದಾಯ ಮೊದಲಿನಿಂದಲೂ ಕಾಯಕವನ್ನು ನಂಬಿದವರು. ಅವರು ತಮ್ಮ ಕಾಯಕದಲ್ಲಿ ಬಸವ ತತ್ವಗಳನ್ನು ಅನುಸರಿಸುತ್ತಾ ಎಲ್ಲ ಧರ್ಮಗಳ ಜನರೊಂದಿಗೆ ಉತ್ತಮ ಸೌಹಾರ್ದತೆಯನ್ನು ಹೊಂದಿದ್ದಾರೆ. ಸಮಾಜದ ಕಾಯಕ ನಿಷ್ಠೆ ಮೆಚ್ಚುವಂತದ್ದು. ಸಮಾಜದ ಹಿರಿಯರ ಇಚ್ಛೆಯಂತೆ ಕಲ್ಯಾಣ ಮಂಟಪವನ್ನು ನಿರ್ಮಿಸಲು 1 ಕೋಟಿ ರೂ ಅನುದಾನವನ್ನು ನೀಡಲಾಗಿದ್ದು, ಈಗಾಗಲೇ ಅದರಲ್ಲಿ 25 ಲಕ್ಷ ರೂ ಬಿಡುಗಡೆಗೊಂಡಿದೆ.
>
> **– ಜಿ.ಎಸ್. ಪಾಟೀಲ.**
> **ಶಾಸಕರು, ರೋಣ.**

ಮುತ್ತಣ್ಣ ಸಂಗಳದ ಅಧ್ಯಕ್ಷತೆ ವಹಿಸಿದ್ದರು. ಸಹಕಾರಿ ಸಂಘದ ಅಧ್ಯಕ್ಷ ಸೋಮಲಿಂಗಪ್ಪ ಚರೇದ ವರದಿ ವಾಚನ ಮಾಡಿದರು. ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ವಿಧಾನ ಪರಿಷತ್ ಮಾಜಿ ಉಪಸಭಾಪತಿ ವೀರಣ್ಣ ಮತ್ತಿಕಟ್ಟಿ, ವೀರಣ್ಣ ಶೆಟ್ಟರ, ಸಂಗಪ್ಪ ಮೆಣಸಿನಕಾಯಿ, ಉಮೇಶ ಮೆಣಸಗಿ, ಶಿವಯೋಗಿ ಜಕ್ಕಲಿ, ರವಿ ಸಂಗನಶೆಟ್ಟರ, ಆನಂದ ಚಂಗಳಿ, ಶಿವು ಹುಲ್ಲೂರ, ಹುಚ್ಚೇಶ ಜವಳಿ, ಗುರುಪಾದಪ್ಪ ಪಟ್ಟಣಶೆಟ್ಟಿ, ಶರಣಪ್ಪನವರು ಜಕ್ಕಲಿ, ವಿಜಯಲಕ್ಷ್ಮೀ ಕೊಟಗಿ, ಶಕುಂತಲಾ ಐಹೊಳಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು 2025–26 ನೇ ಸಾಲಿಗೆ ಮತಿಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಭೌದ್ಧರು, ಸಿಖ್ಖರು, ಫಾರ್ಸಿಗಳ ಸಮುದಾಯದವರಿಗೆ ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸವಾಗಿರುವ 18 ರಿಂದ 55 ವರ್ಷ ವಯೋಮಿತಿವುಳ್ಳ ಆಸಕ್ತರಿಂದ ಈ ಕೆಳಗಿನ ಸಾಲದ ಯೋಜನೆಗಳಿಗೆ ಸಾಲ ಸೌಲಭ್ಯ ಒದಗಿಸಲು ನಿಗಮದ ಅಂತರಜಾಲ ಽಣಣಠಿ://ಇಟಜಭಿಠಿಟಟಿಟುಟಿಜ.ಇಚಿಡಿಟಿಚಿಣಚಿಞಚಿ.ರಠ.ಎಟಿ ರಲ್ಲಿ ದಿನಾಂಕ:22–09–2025 ರಿಂದ ದಿನಾಂಕ: 16–10–2025 ರವರಗೆ ಅರ್ಜಿಗಳನ್ನು ಅಹ್ವಾನಿಸಲಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ನೌಕರರ ಕುಟುಂಬದ ಸದಸ್ಯರು ಯೋಜನೆಗಳಿಗೆ ಅರ್ಹರಾಗಿರುವುದಿಲ್ಲ.

ಶ್ರಮಶಕ್ತಿ ಸಾಲ ಯೋಜನೆ

ಈ ಯೋಜನೆಯಡಿಯಲ್ಲಿ ಅಲ್ಪಸಂಖ್ಯಾತ ವರ್ಗದ ಕುಲಕಸುಬುದಾರರು, ತಮ್ಮ ಸಂಪ್ರದಾಯಕ ಮಾರುಕಟ್ಟೆ ಹಾಗೂ ವೃತ್ತಿ ಕೌಶಲ್ಯತೆಗೆ ಅನುಗುಣವಾಗಿ ಅಭಿವೃದ್ಧಿಗೊಳಿಸುವ ಸಲುವಾಗಿ ನಿಗಮದಿಂದ ಶೇ. 4ರ ಬಡ್ಡಿ ದರದಲ್ಲಿರೂ 50,000/– ರವರಗೆ ಸಾಲ ಸೌಲಭ್ಯವನ್ನು ಕಲ್ಪಿಸಲಾಗುತ್ತದೆ. ಈ ಯೋಜನೆಯಲ್ಲಿ ಶೇ 50ರಷ್ಟು ಸಾಲವನ್ನು 36 ತಿಂಗಳನಲ್ಲಿ ಫಲಾನುಭವಿಯು ಮುರುಪಾವತಿ ಮಾಡಿದಲ್ಲಿ, ಉಳಿದ ಶೇ 50ರಷ್ಟು ಹಣವನ್ನು 'ಬ್ಯಾಕ್‌ಎಂಡ್ ಸಹಾಯಧನವನ್ನಾಗಿ ಪರಿಗಣಿಸಲಾಗುತ್ತದೆ. ಫಲಾನುಭವಿಯು ತಾನು ಪಡೆದ ಸಾಲವನ್ನು 36 ತಿಂಗಳೊಳಗಾಗಿ ಮರುಪಾವತಿ ಮಾಡಲು ವಿಫಲರಾದಲ್ಲಿ ಶೇ 50ರಷ್ಟು ಬ್ಯಾಕ್‌ಎಂಡ್ ಸಹಾಯಧನವನ್ನು ಸಹ ಸಾಲವೆಂದು ಪರಿಗಣಿಸಲಾಗುತ್ತದೆ.

**ವೃತ್ತಿ ಪ್ರೋತ್ಸಾಹ ಯೋಜನೆ**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ವೃತ್ತಿ ಪ್ರೋತ್ಸಾಹ ಸಾಲ ಯೋಜನೆಯಡಿ ಒಟ್ಟು ರೂ.1,00,000/– ಸಾಲದೊಂದಿಗೆ ಇದರಲ್ಲಿ 50% ಸಾಲ ಮತ್ತು 50% ವಿವಿಧ ಆರ್ಥಿಕ ಚಟುವಟಿಕೆಗಳನ್ನು ಕೈಗೊಳ್ಳಲು ಸಹಾಯಧನ ನೀಡಲಾಗುವುದು.

**ಸ್ವಾವಲಂಬಿ ಸಾರಥಿ ಯೋಜನೆ**

ಈ ಯೋಜನೆಯಡಿ ಬ್ಯಾಂಕುಗಳಿಂದ ಮಂಜೂರಾತಿ ನೀಡಿದ/ಪಡೆದ ಟ್ಯಾಕ್ಸಿ/ಸರಕು ವಾಹನಗಳನ್ನು ಖರೀದಿಸಲು ಪ್ರತಿ ಫಲಾನುಭವಿಗೆ ವಾಹನದ ಮೌಲ್ಯದ ಶೇ 50ರಷ್ಟು ಅಥವಾ ಗರಿಷ್ಠ ರೂ. 3,00,000/– ರವರಗೆ ಸಹಾಯಧನ ನೀಡಲಾಗುತ್ತದೆ. ವಾಹನದ ಉಳಿದ ಮೊತ್ತಕ್ಕೆ ಬ್ಯಾಂಕ್ ಸಾಲ ಪಡೆದುಕೊಂಡ ಬಗ್ಗೆ ಬ್ಯಾಂಕ್ ಪತ್ರವನ್ನು ಸಲ್ಲಿಸಬೇಕು.

ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ಶಿಕ್ಷಣಕ್ಕಾಗಿ ಬಡ್ಡಿ ರಹಿತ ಸಾಲ ಯೋಜನೆ

ಈ ಯೋಜನೆಯು ವಿದೇಶದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಮಾಡಬಯಸುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಸಾಲವನ್ನು ನೀಡಲಾಗುವುದು.

**ರೇಷ್ಮೆ ನೂಲು ಬಿಚ್ಚಾಣಿಕೆ ಉದ್ಯಮಕ್ಕೆ ಪ್ರೋತ್ಸಾಹ**

ರೇಷ್ಮೆ ನೂಲು ಬಿಚ್ಚಾಣಿಕೆಯಲ್ಲಿ ತೊಡಗಿರುವ ಅಲ್ಪಸಂಖ್ಯಾತ ಫಲಾನುಭವಿಗಳನ್ನು ಪ್ರೋತ್ಸಾಹಿಸಿ ಅವರ ಆರ್ಥಿಕ ಸ್ಥಿತಿಯನ್ನು ಉತ್ತಮ ಪಡಿಸುವ ಸಲುವಾಗಿ ರೇಷ್ಮೆ ನೂಲು ಬಿಚ್ಚಾಣಿಕೆದಾರರಿಗೆ ಅಗತ್ಯವಿರುವ ದುಡಿಮೆ ಬಂಡವಾಳ (working capital) ಮತ್ತು ಮೂಲಭೂತ ಸೌಕರ್ಯವನ್ನು ಒದಗಿಸಲು ನಿಗಮದಿಂದ ರೂ.2.00 ಲಕ್ಷದವರಗೆ ಸಾಲ ಸಹಾಯಧನ ಒದಗಿಸಲಾಗುವುದು. ಇದರಲ್ಲಿಶೇ.50 ಸಹಾಯಧನವಾಗಿರುತ್ತದೆ.

**ನೇರಸಾಲ ಯೋಜನೆ**

ಈ ಯೋಜನೆಯಡಿಯಲ್ಲಿ ವ್ಯಾಪಾರ/ಉದ್ದಿಮೆ ಚಟುವಟಿಕೆ ಕೈಗೊಳ್ಳಲು ಬಯಸುವ ಫಲಾನುಭವಿಗಳಿಗೆ ಆಸ್ತಿಯ (ಕಟ್ಟಡ/ಭೂಮಿ) ಅಡಮಾನದ ಮೇಲೆ ಸಾಲವನ್ನು ಒದಗಿಸಲಾಗುವುದು. ವಯಸ್ಸು 18 ರಿಂದ 55 ವರ್ಷದೊಳಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ.8.00 ಲಕ್ಷಗಳಿಗಿಂತ ಕಡಿಮೆ ಇರುವ ಅರ್ಜಿದಾರರಿಗೆ ರೂ.20.00 ಲಕ್ಷದವರಗೆ ಶೇ4% ಬಡ್ಡಿ ದರದಲ್ಲಿ ಸಾಲವನ್ನು ನೀಡಲಾಗುವುದು. ಕುಟುಂಬದ ವಾರ್ಷಿಕ ಆದಾಯ ರೂ.8.00 ರಿಂದ 15.00 ಲಕ್ಷದವರೆಗೆ ಇರುವ ಅರ್ಜಿದಾರರಿಗೆ ರೂ.20.00 ಲಕ್ಷದವರೆಗೆ ಶೇ 6 ಬಡ್ಡಿ ದರದಲ್ಲಿ ಸಾಲ ನೀಡಲಾಗುವುದು.

**ಸಾಂತ್ವನ ಯೋಜನೆ**

2025–26ನೇ ಸಾಲಿಗೆ ಅಲ್ಪಸಂಖ್ಯಾತ ಸಮುದಾಯದ ರಾಜ್ಯದಲ್ಲಿನ ವಿಶೇಷ ಹಾಗೂ ದುರ್ಬಲ ವರ್ಗದ ಫಲಾನುಭವಿಗಳಿಗೆ ಗರಿಷ್ಟ 5.00 ಲಕ್ಷ ರೂ. ವರಗೆ ಘಟಕ ವೆಚ್ಚಕ್ಕೆ ಶೇ50 ರಷ್ಟು ಸಹಾಯಧನ ಮತ್ತು ಶೇ.3ರ ಬಡ್ಡಿ ದರದಲ್ಲಿ ಶೇ50 ರಷ್ಟು ಸಾಲವನ್ನು ನೀಡಲಾಗುವುದು. ಹಾಗೂ ರಾಜ್ಯದಲ್ಲಿ ಕೋಮು ಗಲಭೆ ಮತ್ತು ಕೋಮು ಹಿಂಸಾಚಾರದ ಸಂದರ್ಭಗಳಲ್ಲಿ ಹಾಗೂ ಪರಿಸರ ವಿಕೋಪಗಳಿಂದ ವ್ಯಾಪಾರ ಕೇಂದ್ರಗಳು ಹಾಗೂ ವಾಸದ ಮನೆಗಳು ನಾಶ ಅಥವಾ ಹಾನಿಗೊಳಗಾಗಿದ್ದರೆ ಅಂತಹ ಪ್ರಕರಣಗಳಲ್ಲಿ ಕನಿಷ್ಟ ರೂ.2.00 ಲಕ್ಷ ನಷ್ಟವಾಗಿದ್ದರೆ ಸಾಲ ಸೌಲಭ್ಯ ಒದಗಿಸಲಾಗುವುದು.

ಜಿಲ್ಲೆಯ ಅರ್ಹ ಅಲ್ಪಸಂಖ್ಯಾತರ ಜನರು ಮೇಲ್ಕಂಡ 2025–26ನೇ ಸಾಲಿನ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿ ಹಾಗೂ ದಾಖಲಾತಿಗಳನ್ನು ನಕಲು ಪ್ರತಿಯನ್ನು ಜಿಲ್ಲಾ ಕಚೇರಿಗೆ ಸಲ್ಲಿಸಲು ಅಗತ್ಯವಿರುವುದಿಲ್ಲ. ಹಾಗೂ ಜಿಲ್ಲಾ ಕಚೇರಿಯಲ್ಲಿ ಯಾವುದೇ ಅರ್ಜಿಗಳ ಜೊತೆ ದಾಖಲಾತಿಗಳನ್ನು ಸ್ವೀಕರಿಸುವುದಿಲ್ಲ. ಹಾಗೂ ನಿಗಮದ ಅಂತರಜಾಲ https://kmdconline.karnataka.gov.in ಆನ್‌ಲೈನ್ ಮೂಲಕವೇ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08372–295147 ಸಂಪರ್ಕಿಸಬಹುದಾಗಿದೆ.

# ಭಾರೀ ಮಳೆಗೆ ಮನೆ ಛಾವಣಿ ಕುಸಿತ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ಗ್ರಾಮದಲ್ಲಿ ಮಂಗಳವಾರ ಹಗಲು–ರಾತ್ರಿ ಸುರಿದ ಭಾರೀ ಮಳೆಗೆ ಜಮಾಲಶಾವಲಿ ದರಗಾದ ಹಿಂದಿನ ಬಡಾವಣೆಯ ನಿವಾಸಿ ಹಸನಸಾಬ ಸಣ್ಣದಾವಲಸಾಬ ಸೊರಟೂರ ಅವರ ಮನೆಯ ಒಳಛಾವಣಿ ಕುಸಿದು ಬಿದ್ದಿದೆ.

ಧಾರಾಕಾರವಾಗಿ ಸುರಿದ ಮಳೆಗೆ ಏಕಾಏಕಿ ಮಣ್ಣಿನ ಮನೆ ಕುಸಿದು ಬಿದ್ದಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯವಾಗಿಲ್ಲ. ಕೆಲ ದಿನಬಳಕೆ ವಸ್ತುಗಳು ಸೇರಿದಂತೆ ಜೋಳ, ಅಕ್ಕಿ ಇತ್ಯಾದಿ ಪದಾರ್ಥಗಳಿಗೆ ಹಾನಿಯಾಗಿದೆ. ಸ್ಥಳಕ್ಕೆ ಬುಧವಾರ ಉಪತಹಸೀಲ್ದಾರ ಎಸ್.ಎಸ್. ಬಿಚ್ಚಾಲಿ, ಕಂದಾಯ ನಿರೀಕ್ಷಕ ಪ್ರಭು ಭಾಗಲಿ, ಗ್ರಾಮ ಆಡಳಿತಾಧಿಕಾರಿ ಯೋಗೀಶ ಕುರಹಟ್ಟಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

**ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯ**

# ಪೂರ್ವಭಾವಿ ಸಭೆ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಕ್ಟೋಬರ್ 7ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸುವ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಯನ್ನು ಸೆಪ್ಟೆಂಬರ್ 26ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ. ಸದರಿ ಪೂರ್ವಭಾವಿ ಸಭೆಗೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಗದಗ ತಾಲೂಕು ಮಟ್ಟದ ಅಧಿಕಾರಿಗಳು, ಶ್ರೀ ವಾಲ್ಮೀಕಿ ಸಮುದಾಯದ ಮುಖಂಡರು ಹಾಗೂ ಪರಿಶಿಷ್ಟ ವರ್ಗ/ಪರಿಶಿಷ್ಟ ಜಾತಿ / ಹಿಂದುಳಿದ ವರ್ಗ/ ಗಣ್ಯ ವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಆಗಮಿಸಿ ಶ್ರೀ ವಾಲ್ಮೀಕಿ ಜಯಂತಿ ಆಚರಣೆ ಕುರಿತು ಸಲಹೆ–ಸೂಚನೆಗಳನ್ನು ನೀಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಳದಡಿಯಲ್ಲಿ ಉಚಿತ ಆರೋಗ್ಯ ಶಿಬಿರ




**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ಗ್ರಾಮೀಣ ಮಂಡಲದ ವತಿಯಿಂದ ಪ್ರಧಾನಿ ನರೇಂದ್ರ ಮೋದಿಯವರ ಜನ್ಮದಿನದ ಅಂಗವಾಗಿ ಪಕ್ಷದ ಸೇವಾ ಪಾಕ್ಷಿಕ ಅಭಿಯಾನದಡಿ ಉಚಿತ ಆರೋಗ್ಯ ಶಿಬಿರವು ಬೆಳದಡಿ ಗ್ರಾಮದಲ್ಲಿ ಜರುಗಿತು.

ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ, ಮಾಜಿ ಶಾಸಕ ಪಿ.ರಾಜೀವ್ ಹಾಗೂ ಶಿರಹಟ್ಟಿ ಶಾಸಕ ಡಾ. ಚಂದ್ರ ಲಮಾಣಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಗ್ರಾಮೀಣ ಮಂಡಲ ಪ್ರಧಾನ ಕಾರ್ಯದರ್ಶಿ ಸುಭಾಸ ಸುಂಕದ, ಮಂಜುನಾಥ ಹಳ್ಳೂರಮಠ, ಪ್ರಮುಖರಾದ ಭದ್ರೇಶ ಕುಸ್ಲಾಪೂರ, ಬಿ.ಎಸ್. ಚಿಂಚಲಿ, ನಾಗರಾಜ ಮದ್ದೂರ, ಮಹೇಶ ಕಮ್ಮಾರ, ಎಫ್.ಎಸ್. ಪಾಟೀಲ, ಮಹಾದೇವಪ್ಪ ಹಡಪದ, ವೆಂಕಟೇಶ ಸೂರಣಗಿ, ರಾಮಣ್ಣ ಬಡಿಗೇರ, ವಿಠಲ ತೋಟ–ದ, ಶಿವಾನಂದ ಇನಾಮತಿ, ಶಂಕರಗೌಡ್ರ ಪಾಟೀಲ, ಶರಣಪ್ಪ ಹೊಸಮನಿ, ದೇವೆಂದ್ರ ತೊಟದ, ಶಿವಪ್ಪ ತೊಟದ, ಮೊತಿಲಾಲ ಲಮಾಣಿ, ಸಂತೋಷ ಅಕ್ಕಿ, ಅರವಿಂದ ಅಣ್ಣಿಗೇರಿ, ಗೋಪಾಲನ ನಾಯಕ, ನಾಗೇಶ ತೊಟ–ದ, ರಾಮನಗೌಡ ಪಾಟೀಲ, ದಶರಥಪ್ಪ ಭಜಂತ್ರಿ, ವಿರೇಶ ಕಲ್ಮಠ ಮುಂತಾದವರಿದ್ದರು.

# ನಗರದಲ್ಲಿ ಅತಿರುದ್ರ ಮಹಾಯಜ್ಞ ಆಯೋಜನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಸಹದೇವಾನಂದ ಗಿರಿಜೀ ಮಹಾರಾಜ್ ನೇತೃತ್ವದಲ್ಲಿ ಲೋಕಕಲ್ಯಾಣಕ್ಕಾಗಿ ಅತಿರುದ್ರ ಮಹಾಯಜ್ಞ ಹಾಗೂ ಕಿರಿಯ ಕುಂಭಮೇಳ ಆಯೋಜಿಸಲಾಗಿದೆ ಎಂದು ಬಿಜೆಪಿ ಮುಖಂಡ ರವಿ ದಂಡಿನ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಯಾಗರಾಜ್‌ನಲ್ಲಿ ನಡೆದ ಮಹಾ ಕುಂಭಮೇಳದಲ್ಲಿ ಧರ್ಮಧ್ವಜವನ್ನು ಸ್ಥಾಪಿಸಿದ, ಸಹದೇವಾನಂದ ಗಿರಿಜೀ ಮಹಾರಾಜರ ನೇತೃತ್ವದಲ್ಲಿ ಮಹಾಯಜ್ಞ ನಡೆಯುತ್ತಿರುವುದು ಸಂತೋಷ ತಂದಿದೆ. ಈ ಧಾರ್ಮಿಕ ಕಾರ್ಯಕ್ರಮವು ಪಕ್ಷಾತೀತವಾಗಿ, ಜಾತ್ಯತೀತವಾಗಿ ನಡೆಯಲಿದೆ ಎಂದು ತಿಳಿಸಿದರು.

ಸಹದೇವಾನಂದ ಗಿರಿಜೀ ಮಹಾರಾಜರು ನಾಗಾ ಸಾಧು ದೀಕ್ಷೆ ಪಡೆದು ಹಲವು ವರ್ಷಗಳ ಕಾಲ ಹಿಮಾಲಯದಲ್ಲಿ ತಪಸ್ಸು ಮಾಡಿ, 12.5 ಲಕ್ಷ ನಾಗಾಸಾಧುಗಳಿರುವ ಜುನಾ ಅಖಾಡಾ ಸಮೂಹಕ್ಕೆ ಮಂತ್ರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ದಕ್ಷಿಣ ಭಾರತದಲ್ಲಿ ಪ್ರಪ್ರಥಮ ಬಾರಿಗೆ ಕುಷ್ಟಗಿ ನಗರದಲ್ಲಿ ಮಠವನ್ನು ಸ್ಥಾಪಿಸಿ, ಇಳಕಲ್ ನಗರದಲ್ಲಿ ಅತಿರುದ್ರ ಮಹಾಯಜ್ಞ ಹಾಗೂ ಕಿರು ಕುಂಭವಮೇಳವನ್ನು ಯಶಸ್ವಿಯಾಗಿ ನೆರವೇರಿಸಿದ್ದಾರೆ. ಗದಗದಲ್ಲಿಯೂ ಅಂಥದ್ದೊಂದು ಧಾರ್ಮಿಕ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದರು.



ದತ್ತಾ ಡೆವಲಪರ್ಸ್‌ನ ಕಿರಣ ಬೂಮಾ ಮಾತನಾಡಿ, ನವೆಂಬರ್ 11ರಿಂದ 18ರವರೆಗೆ ಮಹಾಯಜ್ಞ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಸುಮಾರು 5 ಲಕ್ಷ ರುದ್ರಾಕ್ಷಿಗಳನ್ನು ವಿತರಣೆ ಮಾಡಲಾಗುವುದು ಎಂದು ತಿಳಿಸಿದರು.

ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಮಾತನಾಡಿ, ಗದಗ–ಬೆಟಗೇರಿ ಅವಳಿ ನಗರ ಸೇರಿದಂತೆ ಜಿಲ್ಲೆಯ ಅನೇಕ ಧಾರ್ಮಿಕ ಮುಖಂಡರು, ವಿವಿಧ ಸಮಾಜದ ಪ್ರಮುಖರು, ಸಂಘ–ಸಂಸ್ಥೆಗಳ ಪದಾಧಿಕಾರಿಗಳ ಜೊತೆ ಈಗಾಗಲೇ ಪೂರ್ವಭಾವಿ ಸಭೆ ನಡೆಸಲಾಗಿದೆ. ಅಲ್ಲದೇ ಸೆ. 28ರಂದು ಎಸ್‌ಬಿಎಸ್ ಕಾರ್ಡನ್‌ನಲ್ಲಿ ಮತ್ತೆ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್. ಎಚ್. ಶಿವನಗೌಡ್ರ, ವಿಜಯಲಕ್ಷ್ಮೀ ಮಾನ್ವಿ, ಫಕೀರಸಾ ಭಾಂಡಗೆ, ಎನ್. ರಾಮರಾವ್, ಬಸವರಾಜ ಬಿಂಗಿ, ಮಹೇಶಗೌಡ ತಲೇಗೌಡರ, ತೋಂಟೇಶ ವೀರಲಿಂಗಯ್ಯನಮಠ, ಗೋಪಾಲ ಅಗರವಾಲ ಇತರರು ಉಪಸ್ಥಿತರಿದ್ದರು.

# ನಾಳೆಯಿಂದ ನಾಟಕ ಪ್ರದರ್ಶನ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಸಿದ್ಧಲಿಂಗೇಶ್ವರ ನಾಟ್ಯ ಸಂಘ ಮಂಡಲಗೇರಿ ವತಿಯಿಂದ ಸೆ. 26ರಿಂದ ಗದಗ ನಗರದ ಭೂಮರೆಡ್ಡಿ ಅವರ ಜಾಗದಲ್ಲಿ ನಾಟಕ ಪ್ರದರ್ಶನ ಆರಂಭವಾಗಲಿದೆ ಎಂದು ಸಂಘದ ಸಂಚಾಲಕ ಕುಮಾರ ಅರಳಿಹಳ್ಳಿ ತಿಳಿಸಿದರು.





ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಕಾಶ ಕಡಪಟ್ಟಿ ಅವರು ಬರೆದ 'ಕಟಗೊಂಡ್ಯಾಕ, ಶಟಗೊಂಡ್ಯಾಕ' ಎನ್ನುವ ಹಾಸ್ಯ ನಾಟಕದ ಮೂಲಕ ನಾಟಕಗಳು ಪ್ರದರ್ಶನಗೊಳ್ಳಲಿವೆ ಎಂದು ಮಾಹಿತಿ ನೀಡಿದರು.

ಪುಟ್ಟರಾಜ ಕಲಾಪೋಷಕರ ಸಂಘದ ಅಧ್ಯಕ್ಷ ಎಫ್.ಪಿ. ಮರಿಗೌಡ ಮಾತನಾಡಿ, ವೃತ್ತಿ ರಂಗಭೂಮಿ ಸಂಕಷ್ಟದಲ್ಲಿದೆ. ಕಲಾವಿದರು ಜೀವನ ನಡೆಸುವುದು ಕಷ್ಟವಾಗಿದೆ. ಸರಕಾರ ಇಂಥ ನಾಟಕ ಕಂಪನಿಗಳಿಗೆ ನೆರವು ನೀಡಬೇಕು. ಕಲಾವಿದರಿಗೆ ಮಾಸಾಶನ ನೀಡಬೇಕು. ಜೊತೆಗೆ ಸಾರ್ವಜನಿಕರು ನಾಟಕ ನೋಡುವ ಮೂಲಕ ವೃತ್ತಿ ರಂಗಭೂಮಿ ಕಲಾವಿದರಿಗೆ ಪ್ರೋತ್ಸಾಹ ನೀಡಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಮುಸ್ತಾಕ ಥಾಲಾಯತ, ಸಿದ್ದಲಿಂಗಪ್ಪ ಅರಳಿ, ಈರಣ್ಣ ಕರಿಬಿಷ್ಟಿ, ಸಂಗಮೇಶ ಬೀಳಗಿ, ಬಸವರಾಜ ಕರಮುಡಿ, ಅಭಿಷೇಕ ಮುಂಡರಗಿ, ಮುತ್ತುರಾಜ ಮಂಗಳೂರು, ಮಾರುತಿ ಗದಗ, ಎಚ್.ಕೆ. ಮುಲ್ಲಾ ಇತರರು ಉಪಸ್ಥಿತರಿದ್ದರು.

# ಅಯೋಧ್ಯಾ ರಾಮಮಂದಿರ ಮಾದರಿ ಪ್ರದರ್ಶನ




**■ವಿಜಯಸಾಕ್ಷಿ ಸುದ್ದಿ, ಗದಗ**

ಆರ್ಯವೈಶ್ಯ ಸಮಾಜ ವತಿಯಿಂದ ನಗರದ ನಗರೇಶ್ವರ ದೇವಸ್ಥಾನದಲ್ಲಿ ಅಯ್ಯೋಧ್ಯಾ ರಾಮ ಮಂದಿರ ಮಾದರಿ ಪ್ರದರ್ಶನ ನಡೆಯುತ್ತಿದ್ದು, ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಆರ್ಯವೈಶ್ಯ ಸಮಾಜದ ಎನ್. ರಾಮರಾವ್ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್ಯವೈಶ್ಯ ಸಮಾಜದ 50ನೇ ವರ್ಷದ ಮಹೋತ್ಸವ ಹಿನ್ನೆಲೆಯಲ್ಲಿ ಈ ಪ್ರದರ್ಶನ ನಡೆಯುತ್ತಿದ್ದು, ದೇಶಾದ್ಯಂತ 2022ರಿಂದ ಪ್ರದರ್ಶನ ನಡೆಯುತ್ತಿದೆ. ಸಾಕ್ಷಾತ್ ರಾಮ ಮಂದಿರದಂತೆಯೇ ನಿರ್ಮಾಣ ಮಾಡಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಕೇತ ಹೆಬಸೂರು, ಕೊದಂಡರಾಮ ಕುಷ್ಟಗಿ, ರಾಘವೇಂದ್ರ ಕಾಲವಾಡ, ವೆಂಕಟೇಶ ಬೆಟಗೇರಿ, ಬಾಲಾಜಿ ಕುಷ್ಟಗಿ, ಕೃಷ್ಣ ಜನಾದ್ರಿ, ವೆಂಕಟೇಶ ಮುಂಡರಗಿ, ವೆಂಕಟೇಶ ಮುತಗಿ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka